ಸಂಪುಟ : 10 ಸಂಚಿಕೆ: 24 ಪುಟ : 4+2 ಬೆಲೆ: 3.00 ಶುಕ್ರವಾರ ಫೆಬ್ರವರಿ 21 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 24 Pages : 4+2 Price : 3.00 Friday February 21 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಉಚಿತ ಕೌಶಲ್ಯ ತರಬೇತಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಕಾಳಿದಾಸ ಶಿಕ್ಷಣ ಸಮಿತಿ ಮತ್ತು ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವುಗಳ ಸಹಯೋಗದೊಂದಿಗೆ ಹಿಂದುಳಿದ ವರ್ಗದ ನಿರುದ್ಯೋಗಿ ಯುವಕ/ ಯುವತಿಯರಿಗೆ ಮೂರು ತಿಂಗಳ ಉಚಿತ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ತರಬೇತಿ ಕಾರ್ಯಕ್ರಮವು ಟೇಲರ್, ಹ್ಯಾಂಡ್ ಎಂಬ್ರಾಯಡರ್, ಬ್ಯೂಟಿಪಾರ್ಲರ್, ಡೊಮೆಸ್ಟಿಕ್ ಡಾಟಾ ಎಂಟ್ರಿ ಆಪರೇಟರ್, ಸೋಲಾರ್ ಪ್ಯಾನಲ್ ಇನ್ಸ್ಟಾಲೇಷನ್, ಹೆಲ್ಪರ್, ಎಲೆಕ್ಟ್ರಿಷಿಯನ್, ಅಸಿಸ್ಟೆಂಟ್ ಎಲೆಕ್ಟ್ರಿಷಿಯನ್, ಗ್ಯಾಸ್ ಟಂಗಸ್ಟನ್ ಆರ್ಕ್ ವೆಲ್ಡಿಂಗ್ ಕೋರ್ಸ್‌ಗಳನ್ನು ಒಳಗೊಂಡಿರುತ್ತದೆ.

ಆಸಕ್ತ ಅಭ್ಯರ್ಥಿಗಳು ತಮ್ಮ ಸ್ವ-ವಿವರಗಳೊಂದಿಗೆ ಹೆಚ್ಚಿನ ಮಾಹಿತಿಗಾಗಿ ಕಳಸಾಪುರ ರಸ್ತೆಯಲ್ಲಿನ ಶ್ರೀ ದೇವರಾಜ ಅರಸು ವಸತಿ ನಿಲಯ, ಬಯಲು ಆಂಜನೇಯ ದೇವಸ್ಥಾನದ ಹತ್ತಿರ-6360925228/8217558701 ಇಲ್ಲಿ ಸಂಪರ್ಕಿಸಲು ಕೋರಿದೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಪರಿಶಿಷ್ಟ ಪಂಗಡದವರ ಕಲ್ಯಾಣಕ್ಕಾಗಿ ಶ್ರಮಿಸುತ್ತಿರುವ ಎನ್.ಜಿ.ಓ ಸಂಸ್ಥೆಗಳು ನ್ಯೂ ಪ್ರಾಜೆಕ್ಟ್ ಕೇಂದ್ರ ಸರ್ಕಾರದಿಂದ ಸಹಾಯಧನ ಪಡೆಯಲು ಆನ್‌ಲೈನ್ ಅರ್ಜಿಗಳನ್ನು ಸಲ್ಲಿಸಲು ಎನ್.ಜಿ.ಓ ಪೋರ್ಟಲ್ ngo.tribal.gov.in ತೆರೆದಿದ್ದು, ಪರಿಶಿಷ್ಟ ಪಂಗಡದವರ ಕಲ್ಯಾಣಕ್ಕಾಗಿ ಶ್ರಮಿಸುತ್ತಿರುವ ಎನ್.ಜಿ.ಓ ಸಂಸ್ಥೆಗಳು ಹೊಸ ಕೇಂದ್ರ ಸರ್ಕಾರದ ಪರಿಷ್ಕೃತ ಮಾರ್ಗಸೂಚಿಯನ್ವಯ ಕಾರ್ಯನಿರ್ವಹಿಸುತ್ತಿದ್ದಲ್ಲಿ ಕೇಂದ್ರ ಸರ್ಕಾರದ ಸಹಾಯಧನ ಪಡೆಯಲು ಎನ್.ಜಿ.ಓ ಪೋರ್ಟಲ್ ನಲ್ಲಿ ngo.tribal.gov.in ಅರ್ಜಿ ಸಲ್ಲಿಸಬಹುದಾಗಿದೆ.

## ಆಸ್ತಿ ಮಾಲೀಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಆಸ್ತಿ ಮಾಲೀಕರಿಗೆ ತಿಳಿಯಪಡಿಸುವುದೆನೆಂದರೆ, ಪೌರಾಡಳಿತ ನಿರ್ದೇಶನಾಲಯ ಬೆಂಗಳೂರು ಇವರ ಸುತ್ತೋಲೆ ಯಂತೆ ಇ-ಆಸ್ತಿ ತಂತ್ರಾಂಶವನ್ನು ಸರಳಿಕರಣಗೊಳಿಸಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಲ್ಲಿ ಇ-ಕಣಜ ತಂತ್ರಾಂಶದಲ್ಲಿ ಗಣಕೀಕರಣಗೊಂಡ ಆಸ್ತಿಗಳ ವಿವರವನ್ನು ಎಲ್ಲಾ ಸಾರ್ವಜನಿಕರಿಗೆ ಪರಿಶೀಲನೆ ಮಾಡಿ ಖಾತ್ರಿ ಪಡಿಸಿಕೊಳ್ಳಲು ಇ-ಆಸ್ತಿ ತಂತ್ರಾಂಶದಲ್ಲಿ ದೃಢೀಕರಿಸುವ ಕುರಿತು ಪ್ರಚುರಪಡಿಸಲಾಗಿದೆ. ಫೆಬ್ರವರಿ 25ರೊಳಗಾಗಿ ಖಾತ್ರಿಪಡಿಸಿಕೊಂಡು ಕಡ್ಡಾಯವಾಗಿ ಆಸ್ತಿ ತೆರಿಗೆ ಪಾವತಿಸಿ ನಮೂನೆ-3/2 ಪಡೆದುಕೊಳ್ಳುವುದು. ತಪ್ಪಿದಲ್ಲಿ ನಿಮ್ಮ ಆಸ್ತಿಗೆ ಸಂಬಂಧಪಟ್ಟಂತೆ ಯಾವುದೇ ತಂಟೆ/ತಕರಾರಿಗೆ ನಗರಸಭೆ ಜವಬ್ದಾರರಾಗಿರುವುದಿಲ್ಲ ಎಂದು ಗದಗ-ಬೆಟಗೇರಿ ನಗರಸಭೆ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

### ಲೇವಾದೇವಿ, ಗಿರವಿದಾರರು, ಹಣಕಾಸು ಸಂಸ್ಥೆಗಳ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್

# ಸಾಮರ್ಥ್ಯದ ಆಧಾರದ ಮೇಲೆ ಸಾಲ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಸಾರ್ವಜನಿಕರಿಗೆ ನೀಡುತ್ತಿರುವ ಕಿರುಕುಳ ಪ್ರಕರಣಗಳು ಕ್ರಮೇಣ ಹೆಚ್ಚುತ್ತಿವೆ. ಇದಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಸುಗ್ರೀವಾಜ್ಞೆ ಹೊರಡಿಸಿದ್ದು, ಸರಕಾರ ಜಾರಿಗೆ ತಂದಿರುವ ನಿಯಮಾವಳಿಗಳನ್ನು ಎಲ್ಲರೂ ತಪ್ಪದೇ ಪಾಲಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಡಳಿತ ಭವನದ ಅಡಿಟೋರಿಯಂ ಸಭಾಂಗಣದಲ್ಲಿ ಗುರುವಾರ ಜರುಗಿದ ಲೇವಾದೇವಿ, ಗಿರವಿದಾರರು ಹಾಗೂ ಹಣಕಾಸು ಸಂಸ್ಥೆಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಸಾಲ ವಸೂಲಿ ಸಂದರ್ಭದಲ್ಲಿ ಅವಾಚ್ಯ ಶಬ್ದಗಳ ಬಳಕೆ ಮಾಡುತ್ತಿರುವ ಘಟನೆಗಳ ವರದಿಗಳು ಬರುತ್ತಿವೆ. ಸಾಲ ಮರುಪಾವತಿಗೆ ಸೂಚನೆ ನೀಡಲು ಕಾಯ್ದೆಯಡಿಯಲ್ಲಿನ ನಿಯಮಾವಳಿಗಳನ್ನು ಉಲ್ಲಂಘಿಸುವ ಸಂಸ್ಥೆಗಳ ಮೇಲೆ ಪ್ರಕರಣ ದಾಖಲಿಸಲಾಗುವದು ಎಂದು ಹೇಳಿದರು.

ಸರಕಾರ ಜಾರಿಗೊಳಿಸಿರುವ ಆದ್ಯಾದೇಶ ಸಾಲ ಕೊಡುವರಿಗೆ ಹಾಗೂ ಪಡೆಯುವವರಿಗೆ ಅನುಕೂಲವಾಗುವ ಕಾಯ್ದೆಯಾಗಿದ್ದು, ಅಧಿಕೃತ ಹಾಗೂ ಅಧಿಕೃತವಲ್ಲದ ಲೇವಾದೇವಿದಾರರಿಗೆ ಸೂಚನೆಗಳನ್ನು ನೀಡುವ ಉದ್ದೇಶದೊಂದಿಗೆ ಈ ಸಭೆಯನ್ನು ಆಯೋಜಿಸಲಾಗಿದೆ. ಸಾಲ ಮರುಪಾವತಿಯ ಸಾಮರ್ಥ್ಯದ ಆಧಾರದ ಮೇಲೆ ಸಾಲ ನೀಡಬೇಕು. ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲ ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಜಿಲ್ಲೆಯ ನೋಂದಣಿ ಪ್ರಾಧಿಕಾರದಲ್ಲಿ ನೋಂದಣಿಯಾಗಬೇಕು ಎಂದು ತಿಳಿಸಿದರು.

ಮೈಕ್ರೋ ಫೈನಾನ್ಸ್ ಸಂಸ್ಥೆಗಳು ವಿಧಿಸಲಾದ ಪರಿಣಾಮಕಾರಿ ಬಡ್ಡಿ ದರವನ್ನು ತಮ್ಮ ಎಲ್ಲಾ ಕಚೇರಿಗಳಲ್ಲಿನ ಪ್ರಮುಖ ಸ್ಥಳಗಳಲ್ಲಿ ಹಾಗೂ ಜಾಲತಾಣಗಳಲ್ಲಿ ಪ್ರದರ್ಶಿಬೇಕು. ಅಲ್ಲದೇ ಸಾಲಗಾರರೊಂದಿಗಿನ ಎಲ್ಲ ವ್ಯವಹಾರಗಳು ಕನ್ನಡದಲ್ಲಿರಬೇಕು. ಸಾಲದ ಅರ್ಜಿ ನಮೂನೆಯಲ್ಲಿ ಅರ್ಜಿ ನಮೂನೆಯೊಂದಿಗೆ ಸಲ್ಲಿಸಬೇಕಾದ ಅವಶ್ಯಕ ದಸ್ತಾವೇಜುಗಳನ್ನು ಸೂಚಿಸುವದರ ಜೊತೆಗೆ ಪ್ರತಿಯೊಂದು ಸಾಲ ನೀಡಿಕೆ ಏಜೆನ್ಸಿ ಎಂ.ಎಫ್.ಆಯ್ ಸಂಸ್ಥೆಗಳು, ಲೇವಾದೇವಿದಾರರು ನಗದು ಪುಸ್ತಕ, ಖಾತಾ ಪುಸ್ತಕ ಮತ್ತು ನಿರ್ದಿಷ್ಟಪಡಿಸಬಹುದಾದ ಇತರೆ ಲೆಕ್ಕ ಪುಸ್ತಕಗಳನ್ನು ಇಟ್ಟು ನಿರ್ವಹಿಸಬೇಕು. ಪ್ರತಿ ತ್ರೈಮಾಸಿಕ ಹಾಗೂ ವಾರ್ಷಿಕ ವರದಿಯನ್ನು ನೀಡಬೇಕು.

ಸಾಲಗಾರನಿಗೆ ಪ್ರತಿಯೊಂದು ಸಾಲ ನೀಡಿಕೆ ಏಜೆನ್ಸಿ, ಎಂ.ಎಫ್.ಆಯ್ ಸಂಸ್ಥೆಗಳು, ಲೇವಾದೇವಿದಾರರ ಕಾರ್ಯನಿರ್ವಾಹಕರ ಹೆಸರು ಮತ್ತು ವಿಳಾಸ, ಸಾಲದ ಮೊತ್ತ, ದಿನಾಂಕ ಹಾಗೂ ಅದರ ವಾಯಿದೆ ಮತ್ತು ವಿಧಿಸಲಾದ ಪರಿಣಾಮಕಾರಿ ಬಡ್ಡಿ ದರ ತೋರಿಸುವ ನಿರ್ದಿಷ್ಟಪಡಿಸಲಾದ ನಮೂನೆಯಲ್ಲಿನ ವಿವರ ಪಟ್ಟಿಯನ್ನು ತಲುಪಿಸಬೇಕು. ಸ್ಥಳೀಯ ಪ್ರದೇಶದಲ್ಲಿ ನೋಂದಾಯಿತ ಕಚೇರಿಯನ್ನು ಹೊಂದುವದರ ಜೊತೆಗೆ ಸಾಲಗಾರನಿಗೆ ಸಂಸ್ಥೆ ಅಥವಾ ಏಜೆನ್ಸಿಯ ಅಧಿಕೃತ ಪ್ರತಿನಿಧಿಯು ಯುಕ್ತವಾಗಿ ಸಹಿಮಾಡಿದ ರಸೀದಿಯನ್ನು ನೀಡಬೇಕು ಎಂದರು. ಸಾಲ ನೀಡಿಕೆ ಏಜೆನ್ಸಿ, ಎಂ.ಎಫ್.ಆಯ್ ಸಂಸ್ಥೆಗಳು, ಲೇವಾದೇವಿದಾರರಿಂದ ಸರಕಾರದ ಆದ್ಯಾದೇಶ ಉಲ್ಲಂಘನೆ ಕುರಿತು ಸಂಬಂಧಪಟ್ಟ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಬಹುದಾಗಿದೆ. ವಿವಾದಗಳನ್ನು ಇತ್ಯರ್ಥಪಡಿಸುವುದಕ್ಕಾಗಿ ಸಾಲಗಾರ ಮತ್ತು ಲೇವಾದೇವಿದಾರನ ನಡುವೆ ಮಧ್ಯಸ್ಥಗಾರನಾಗಿ ಕಾರ್ಯನಿರ್ವಹಿಸಲು ಸರ್ಕಾರದ ಮೂಲಕ ಒಂಬುಡ್ಸಮನ್ ನೇಮಕ ಮಾಡಲಾಗುವದು.

**ನೋಂದಣಿ ಮತ್ತು ನವೀಕರಣ**

ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಕಾರ್ಯಾಚರಣೆಗಾಗಿ ನಿರ್ದಿಷ್ಟ ಪಡಿಸಬಹುದಾದ ವಿಧಾನದಲ್ಲಿ ಒಂದು ವರ್ಷದ ಅವಧಿಗಾಗಿ ನೋಂದಣಿಯನ್ನು ಮಾಡಲಾಗುವದು. ನೊಂದಣಿಯ ನವೀಕರಣಕ್ಕಾಗಿ ಒಂದು ವರ್ಷದ ಮುಕ್ತಾಯಗೊಳ್ಳುವ ಮೊದಲು ಅರವತ್ತು ದಿನಗೊಳಗಾಗಿ ಅರ್ಜಿ ಸಲ್ಲಿಸತಕ್ಕದ್ದು, ಸಂಸ್ಥೆಗಳ ಕ್ಷೇತ್ರ ಮಟ್ಟದ ಕಾರ್ಯಕ್ಷಮತೆಯ ಪರಿಶೀಲನೆ ಹಾಗೂ ಸಾರ್ವಜನಿಕರಿಂದ ಆಕ್ಷೇಪಣೆಗಳನ್ನು ಆಲಿಸಿದ ತರುವಾಯ ನೊಂದಣಿ ನವೀಕರಣ ಮಂಜೂರು ಅಥವಾ ನಿರಾಕರಿಸಲಾಗುವುದು.

> ಮೈಕ್ರೋ ಫೈನ್ನಾನ್, ಗಿರವಿದಾರರು ಹಾಗೂ ಲೇವಾದೇವಿದಾರರ ಸಭೆಯನ್ನು ಈಗಾಗಲೇ ಜರುಗಿಸಿ ಅಗತ್ಯ ಸೂಚನೆಗಳನ್ನು ನೀಡಲಾಗಿದೆ. ಸಾಲ ನೀಡುವಾಗ ಹಾಗೂ ವಸೂಲಿ ಸಂದರ್ಭದಲ್ಲಿ ಮಾರ್ಗಸೂಚಿಗಳನ್ನು ತಪ್ಪದೇ ಪಾಲಿಸಬೇಕು. ಈ ಕುರಿತು ಜಿಲ್ಲೆಯ ಎಲ್ಲ ಪೊಲೀಸ್ ಠಾಣೆಗಳಿಗೆ ಮಾಹಿತಿ ನೀಡಲಾಗಿದೆ. ಸಾಲ ವಸೂಲಾತಿ ಸಂದರ್ಭದಲ್ಲಿ ಯಾವುದೇ ತೊಂದರೆಗಳು ಎದುರಾದಲ್ಲಿ ಹತ್ತಿರದ ಪೊಲೀಸ್ ಠಾಣೆಗೆ ಮಾಹಿತಿ ನೀಡಬೇಕು.
>
> – ಬಿ.ಎಸ್. ನೇಮಗೌಡ.
> ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ.

### ಕನ್ನಡ ಸಾಹಿತ್ಯ ಸಮ್ಮೇಳನದ ನಿಮಿತ್ತ ರಾಷ್ಟ್ರ ಧ್ವಜಾರೋಹಣ ನೆರವೇರಿಸಿದ ಶಾಸಕ ಜಿ.ಎಸ್. ಪಾಟೀಲ

# ಕ್ರಿಯಾಶೀಲ ಮಠಾಧೀಶರಿಂದ ಎಲ್ಲವೂ ಸಾಧ್ಯ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಮಠ-ಮಾನ್ಯಗಳಿಗೆ ಒಬ್ಬ ಕ್ರಿಯಾಶೀಲ ಮಠಾಧಿಪತಿ ಇದ್ದರೆ ಏನೆಲ್ಲ ಸಾಧಿಸಬಹುದು ಎಂಬುದಕ್ಕೆ ನಿಡಗುಂದಿಕೊಪ್ಪದ ಶಾಖಾ ಶಿವಯೋಗ ಮಂದಿರದ ಶ್ರೀ ಅಭಿನವ ಚನ್ನಬಸವ ಮಹಾಸ್ವಾಮಿಗಳೇ ಪ್ರತ್ಯಕ್ಷ ಉದಾಹರಣೆಯಾಗಿದ್ದಾರೆ. ಅವರ ಸಂಕಲ್ಪದಿಂದ ಇಂದು ನಿಡಗುಂದಿಕೊಪ್ಪದ ಶ್ರೀಮಠದಲ್ಲಿ ಗಜೇಂದ್ರಗಡ ತಾಲೂಕಿನ ಪ್ರಪ್ರಥಮ ಕನ್ನಡ ಸಾಹಿತ್ಯ ಸಮ್ಮೇಳನ ನಡೆಯುತ್ತಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು. ನಿಡಗುಂದಿಕೊಪ್ಪದ ಶಾಖಾ ಶಿವಯೋಗ ಮಂದಿರದಲ್ಲಿ ನಡೆಯುತ್ತಿರುವ ಗಜೇಂದ್ರಗಡದ ಪ್ರಥಮ ತಾಲೂಕಾ ಕನ್ನಡ ಸಾಹಿತ್ಯ ಸಮ್ಮೇಳನದ ನಿಮಿತ್ತ ರಾಷ್ಟ್ರ ಧ್ವಜಾರೋಹಣವನ್ನು ನೆರವೇರಿಸಿ ಅವರು ಮಾತನಾಡಿದರು.

ನಿಡಗುಂದಿ ಮತ್ತು ನಿಡಗುಂದಿಕೊಪ್ಪದ ಸರ್ವ ಸದ್ಭಕ್ತರ ಇಚ್ಛೆಯಂತೆ ಗಜೇಂದ್ರಗಡ ತಾಲೂಕಿನ ಪ್ರಥಮ ಸಮ್ಮೇಳನ



ಇಲ್ಲಿ ನಡೆಯುತ್ತಿದೆ. ಇದಕ್ಕೆ ಸರ್ವಾಧ್ಯಕ್ಷರನ್ನಾಗಿ ಅತ್ಯಂತ ಸೂಕ್ತ ವ್ಯಕ್ತಿಯನ್ನು ಹಿರೆವಡೆಯರ ಗುರುಗಳನ್ನು ಆಯ್ಕೆ ಮಾಡಿದ ಆಯ್ಕೆ ಸಮಿತಿಯನ್ನು ತಾವು ಅಭಿನಂದಿಸುವದಾಗಿ ತಿಳಿಸಿದರು. ದಿವ್ಯ ಸಾನ್ನಿಧ್ಯ ವಹಿಸಿದ್ದ ಅಭಿನವ ಚನ್ನಬಸವ ಸ್ವಾಮೀಜಿ ಆಶೀರ್ವಚನ ನೀಡಿ, ವರ್ಷಕ್ಕೊಮ್ಮೆ ನಡೆಯುವ ಶ್ರೀ ಕುಮಾರೇಶ್ವರ ಜಾತ್ರೆಯ ಮುನ್ನಾದಿನ ಏನಾದರೊಂದು ಹೊಸ ಕಾರ್ಯಕ್ರಮವನ್ನು ಆಯೋಜಿಸುವ ಪದ್ಧತಿಯನ್ನು ಬಹಳ ವರ್ಷಗಳಿಂದಲೂ ಅನುಸರಿಸಿಕೊಂಡು ಬರಲಾಗಿದೆ. ಹೋದ ವರ್ಷ ರೈತರಿಗಾಗಿ ಕಾರ್ಯಕ್ರಮವನ್ನು ಮಾಡಿದ್ದೆವು. ಈ ಸಾರೆ ಹೊಳೆದದ್ದು ಕನ್ನಡ ಸಾಹಿತ್ಯ ಸಮ್ಮೇಳನದ ವಿಚಾರ. ಶಾಸಕರು, ಜಿಲ್ಲಾ ಕಸಾಪ ಪದಾಧಿಕಾರಿಗಳು ಮತ್ತು ತಾಲೂಕು ಪದಾಧಿಕಾರಿಗಳೊಂದಿಗೆ, ಸದ್ಭಕ್ತರೊಂದಿಗೆ ಚರ್ಚಿಸಿದಾಗ ಎಲ್ಲರೂ ಒಮ್ಮನದ ಸಮ್ಮತಿ ನೀಡಿದ್ದರಿಂದ ಈ ಕಾರ್ಯಕ್ಕೆ ಚಾಲನೆ ದೊರಕಿತು.

> ತಮ್ಮ ಶ್ರೀಮಠದ ಜಾತ್ರೆಯೊಂದಿಗೆ ಕನ್ನಡ ನುಡಿ ಸೇವೆಯನ್ನು ತಾಲೂಕಾ ಸಮ್ಮೇಳನದ ರೂಪದಲ್ಲಿ ಏರ್ಪಡಿಸಿರುವುದು ಶ್ಲಾಘನೀಯ. ಅದಕ್ಕಾಗಿ ಶ್ರೀ ಅಭಿನವ ಚನ್ನಬಸವ ಮಹಾಸ್ವಾಮಿಗಳನ್ನು, ನಿಡಗುಂದಿ ಮತ್ತು ನಿಡಗುಂದಿಕೊಪ್ಪದ ಸರ್ವ ಸದ್ಭಕ್ತರನ್ನು, ಸಕಲ ಕನ್ನಡಾಭಿಮಾನಿಗಳನ್ನು ಭಕ್ತಿಪೂರ್ವಕವಾಗಿ ಅಭಿನಂದಿಸುವದಾಗಿ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

▸▸ 3ನೇ ಪುಟಕ್ಕೆ

## ನೇತ್ರ ತಪಾಸಣೆ, ಶಸ್ತ್ರಚಿಕಿತ್ಸಾ ಶಿಬಿರ ಇಂದು




■ವಿಜಯಸಾಕ್ಷಿ ಸುದ್ದಿ,

ರೋಟರಿ ಕ್ಲಬ್ ಹಾಗೂ ರೋಟರಿ ಕ್ಲಬ್ ವೆಲ್ಫೇರ್ ಸೊಸೈಟಿ ಗದಗ-ಬೆಟಗೇರಿ ವತಿಯಿಂದ ಫೆ. 21ರಂದು ರೋಟರಿ ಕಮ್ಯುನಿಟಿ ಕೇರ್ ಸೆಂಟರ್‌ನಲ್ಲಿ 200ನೇ ನೇತ್ರ ಚಿಕಿತ್ಸಾ ಶಿಬಿರವನ್ನು ಆಯೋಜಿಸಲಾಗಿದೆ ಎಂದು ಖ್ಯಾತ ವೈದ್ಯ ಡಾ. ಶೇಖರ್ ಸಜ್ಜನ್ ಮಾಹಿತಿ ನೀಡಿದರು.

ಗುರುವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರೋಟರಿ ಕ್ಲಬ್ ಮತ್ತು ವೆಲ್ಫೇರ್ ಸೊಸೈಟಿ ಕಳೆದ 20 ವರ್ಷದಿಂದ ಈ ಸಾಮಾಜಿಕ ಸೇವೆಯನ್ನು ನೀಡುತ್ತಾ ಬಂದಿದ್ದು, ಶುಕ್ರವಾರ ನಡೆಯುವ ಶಿಬಿರವನ್ನು ತೋಂಟದಾರ್ಯ ಮಠದ ಜ. ತೋಂಟದ ಸಿದ್ಧರಾಮ ಸ್ವಾಮೀಜಿ ಉದ್ಘಾಟಿಸಲಿದ್ದಾರೆ ಎಂದರು.

ರೋಟರಿ ಕ್ಲಬ್ ಈವರೆಗೆ 3800ಕ್ಕೂ ಹೆಚ್ಚು ಉಚಿತ ಶಸ್ತ್ರ ಚಿಕಿತ್ಸೆ ನಡೆಸಿದೆ. ಜಗತ್ತಿನ 125 ದೇಶಗಳಲ್ಲಿ ರೋಟರಿ ಸಂಸ್ಥೆ ಸಮಾಜ ಸೇವೆ ಮಾಡುತ್ತಿದೆ. ಮಹಾರಾಷ್ಟ್ರ, ಕರ್ನಾಟಕ, ಗೋವಾ ರಾಜ್ಯಗಳಲ್ಲಿ ತನ್ನ ಸೇವೆಯನ್ನು ಮುಂದುವರೆಸಿಕೊಂಡು ಬಂದಿದ್ದು, ಹಿರಿಯರು, ಮಕ್ಕಳು, ಮಹಿಳೆಯರಿಗೆ ಪ್ರತ್ಯೇಕ ಸಂಸ್ಥೆ ನಿರ್ಮಿಸುವ ಮೂಲಕ ಸಮಾಜದಲ್ಲಿ ತನ್ನದೇ ಆದ ವಿಶಿಷ್ಠ ಛಾಪು ಮೂಡಿಸಿದೆ ಎಂದರು.

ಡಾ. ಶ್ರೀಧರ್ ಸುಲ್ತಾನಪುರ ಮಾತನಾಡಿ, ನೇತ್ರ ಪರೀಕ್ಷಿಸಿದ ನಂತರ ಶಸ್ತ್ರ ಚಿಕಿತ್ಸೆಗೆ ಅರ್ಹರಾದವರಿಗೆ ಉಚಿತ ವಸತಿ, ಊಟದ ವ್ಯವಸ್ಥೆ ಕಲ್ಪಿಸಲಾಗಿದೆ. ಶಸ್ತ್ರ ಚಿಕಿತ್ಸೆ ನಡೆಸಿದ ಮೇಲೆ ಕನ್ನಡಕದೊಂದಿಗೆ ಅವರನ್ನು ಬೀಳ್ಕೊಡಲಾಗುವುದು. ಯಾವುದೇ ತಾರತಮ್ಯವಿಲ್ಲದೇ ಎಲ್ಲ ರೋಗಿಗಳನ್ನು ನೋಡಿಕೊಳ್ಳಲಾಗುವುದು. ದಾನಿಗಳ ಸಹಾಯದಿಂದ ನಮ್ಮ ಸಂಸ್ಥೆ ಉತ್ತಮ ಸೇವೆ ಮಾಡುತ್ತಾ ಸಾಗುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಡಾ. ಆರ್.ಬಿ ಉಪ್ಪಿನ್, ಸಂತೋಷ ಅಕ್ಕಿ, ಸಿ.ಪಿ ಹುಣಸಿಕಟ್ಟಿ ಮುಂತಾದವರು ಉಪಸ್ಥಿತರಿದ್ದರು.



50ನೇ

ವರ್ಷದ ವಿವಾಹ ವಾರ್ಷಿಕೋತ್ಸವದ ಶುಭಾಶಯಗಳು

ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ
ಗದಗ ಜಿಲ್ಲಾ ಉಪಾಧ್ಯಕ್ಷರಾದ
ಶ್ರೀ ನಾಗೋಸಾ ರಾಮಕೃಷ್ಣಸಾ ಭಾಂಡಗೆ
ಶ್ರೀಮತಿ ಶಕುಂತಲಾಬಾಯಿ ನಾಗೋಸಾ ಭಾಂಡಗೆ

ದಂಪತಿಗಳಿಗೆ 50ನೇ ವಿವಾಹ ವಾರ್ಷಿಕೋತ್ಸವದ
ಹಾರ್ದಿಕ ಶುಭಾಶಯಗಳು

ಶುಭಕೋರುವವರು

ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘ, ಗದಗ
ರಾಜ್ಯ ಉಪಾಧ್ಯಕ್ಷರು: ಶ್ರೀ ಮಂಜುನಾಥ ಬಸಪ್ಪ ಅಬ್ಬಿಗೇರಿ
ಜಿಲ್ಲಾಧ್ಯಕ್ಷರು: ಜಗದೀಶ ಎಸ್. ಪಿ.
ಪ್ರಧಾನ ಕಾರ್ಯದರ್ಶಿ ದೇವಪ್ಪ ಲಿಂಗದಾಳ
ಖಜಾಂಚಿ : ರವಿಕಾಂತ ಅಂಗಡಿ
ಸದಸ್ಯರು : ಅಜೀತ ಹೊಂಬಾಳಿ, ನೂರಅಹ್ಮದ ಮಕಾನದಾರ, ರಾಜು ಹೆಬ್ಬಳ್ಳಿ
ಹೆಚ್. ಎಂ. ಶರೀಫನವರ

## ಸಂಪಾದಕೀಯ

# ಗ್ಯಾರಂಟಿ ಯೋಜನೆಗಳ ಬಗ್ಗೆ ಕಾಂಗ್ರೆಸ್ಸಿಗರಿಗೇ ಇಲ್ಲ ಗೌರವ

ಅಧಿಕಾರಕ್ಕಾಗಿ ಗ್ಯಾರಂಟಿ ಯೋಜನೆಗಳನ್ನು ಘೋಷಿಸಿ ಕಾಂಗ್ರೆಸ್, ಅಧಿಕಾರಕ್ಕೆ ಏರುತ್ತಿದ್ದಂತೆ ನುಡಿದಂತೆ ನಡೆಯಿತು. ಅಧಿಕಾರಕ್ಕೆ ಬಂದ ಒಂದೇ ವರ್ಷದಲ್ಲಿ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿ ಜನಮನ ಸೆಳೆಯಿತು. ಜನಸಾಮಾನ್ಯರ ಬದುಕಿನಲ್ಲಿ ಒಂದಷ್ಟು ಬದಲಾವಣೆಗಳು ಕಾಣಲು ಸಾಧ್ಯವಾಯಿತು.

ಸರಕಾರದ ಮಹತ್ವಾಕಾಂಕ್ಷಿ ಯೋಜನೆ ಸಮರ್ಪಕ ಅನುಷ್ಠಾನಕ್ಕಾಗಿ ಕಾಂಗ್ರೆಸ್ ಕಾರ್ಯಕರ್ತರೇ ಇರುವ ಸಮಿತಿಗಳನ್ನು ರಚನೆ ಮಾಡಿತು. ಜಿಲ್ಲಾ ಮತ್ತು ತಾಲೂಕು ಮಟ್ಟದ ಅನುಷ್ಠಾನ ಸಮಿತಿಗೆ ಅಧ್ಯಕ್ಷರನ್ನು ಮಾಡಿ, ಮಾಸಿಕ 40 ಸಾವಿರ ಮತ್ತು 25 ಸಾವಿರ ಗೌರವಧನವನ್ನೂ ನೀಡಿತು.

ಆದರೆ ಈಗ ಪಂಚ ಗ್ಯಾರಂಟಿ ಯೋಜನೆಗಳ ಬಗ್ಗೆ ಸಚಿವರಿಗೆ ತಾತ್ಸಾರ ಮೂಡಿದೆ. ಎರಡು ತಿಂಗಳಿಂದ ಗ್ರಹಲಕ್ಷ್ಮಿ ಹಣ ಬಂದಿಲ್ಲ ಎಂದು ಮಹಿಳೆಯರು ದೂರು ನೀಡಿದರೆ, ಇಂಧನ ಸಚಿವ ಕೆ.ಜೆ. ಜಾರ್ಜ್, ಗೃಹಲಕ್ಷ್ಮಿ ಹಣ ಎಂದರೆ ತಿಂಗಳು ಬರುವ ಸಂಬಳವೇ ಎಂದು ಉಡಾಫೆ ಉತ್ತರ ನೀಡಿದ್ದಾರೆ.

ಇನ್ನು ಕಾರ್ಮಿಕ ಸಚಿವ ಸಂತೋಷ್ ಲಾಡ್, ಗೃಹಲಕ್ಷ್ಮಿ ಹಣ ಕೇಳಿದಂತೆ ಪ್ರಧಾನಿ ನರೇಂದ್ರ ಮೋದಿಗೆ 15 ಲಕ್ಷ ರೂಪಾಯಿ ಯಾಕೆ ಹಾಕಿಲ್ಲ ಎಂದು ಕೇಳಿದ್ದೀರಾ ಎಂದು ಮಾಧ್ಯಮ ಪ್ರತಿನಿಧಿಗಳಿಗೆ ಮರು ಪ್ರಶ್ನೆ ಮಾಡಿದ್ದಾರೆ.

ಗೃಹಲಕ್ಷ್ಮಿ ಹಣ ಎಂದರೆ ಪ್ರತಿ ತಿಂಗಳು ಬರುವ ಸಂಬಳ ಅಲ್ಲ. ಸಂಬಳ ಹಾಗಿದ್ದರೆ ಜಾರ್ಜ್ ಅವರನ್ನು ಪ್ರಶ್ನಿಸುವ ಪ್ರಮೇಯವೇ ಬರುತ್ತಿರಲಿಲ್ಲ. ಓಟು ಪಡೆಯುವ ಮುನ್ನ ಮನೆ ಮನೆಗೆ ಹೋಗಿ ಕೈಮುಗಿದು ವಿನಂತಿಸಿದ ಜನರಿಗೆ ಈ ರೀತಿ ಉದ್ಧಟತನದ ಉತ್ತರ ನೀಡುವುದು ಸರಿಯಲ್ಲ.

ಇನ್ನು ಲಾಡ್ ಅವರು ಮೊದಲು ಪತ್ರಕರ್ತರ ಕೇಳಿದ ಪ್ರಶ್ನೆಗೆ ಉತ್ತರ ಕೊಡಲಿ. ಸಚಿವರು ಕೊಡುವ ಉತ್ತರ ರಾಜ್ಯದ ಲಕ್ಷಾಂತರ ಜನ ಬಡ ಹೆಣ್ಣು ಮಕ್ಕಳಿಗೆ ನೀಡುವ ಉತ್ತರ ಎನ್ನುವುದನ್ನು ಅರ್ಥ ಮಾಡಿಕೊಳ್ಳಬೇಕು. ಪ್ರಧಾನಿ ಮೋದಿ 15 ಲಕ್ಷ ರೂಪಾಯಿ ಹಾಕಿಲ್ಲ ಎನ್ನುವ ಕಾರಣಕ್ಕೆ, ರಾಜ್ಯದಲ್ಲಿ ಬಿಜೆಪಿ ಅಧಿಕಾರ ಕಳೆದುಕೊಂಡಿದೆ. ಕೇಂದ್ರದಲ್ಲಿ ಬಿಜೆಪಿ ಸಂಖ್ಯೆ ಕುಸಿತವಾಗಿದೆ ಎನ್ನುವುದನ್ನು ಅರ್ಥ ಮಾಡಿಕೊಂಡರೆ ಸಾಕು.

# ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಸಾಲಿನಲ್ಲಿ ಆದರ್ಶ ವಿದ್ಯಾಲಯ ಕೊರ್ಲಹಳ್ಳಿ ತಾ: ಮುಂಡರಗಿ ಹಾಗೂ ಆದರ್ಶ ವಿಶ್ವ ವಿದ್ಯಾಲಯ ಇಟಗಿ ತಾ: ರೋಣ ಇಲ್ಲಿ 6ನೇ ತರಗತಿ ದಾಖಲಾತಿಯ ಪ್ರವೇಶ ಪರೀಕ್ಷೆಗೆ ಫೆಬ್ರವರಿ 28 ರವರೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಗದಗ ಜಿಲ್ಲೆಯಲ್ಲಿ 5ನೇ ತರಗತಿ ವ್ಯಾಸಂಗ ಮಾಡುತ್ತಿರುವ , ಪೋಷಕರು ತಾಲೂಕಿನಲ್ಲಿ ವಾಸವಿದ್ದಲ್ಲಿ ವಾಸಸ್ಥಳ ದೃಢೀಕರಣ ಪತ್ರ ಹೊಂದಿರುವ ಅರ್ಹ ವಿದ್ಯಾರ್ಥಿಗಳು ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ವಿದ್ಯಾಥಿಯು ಓದುತ್ತಿರುವ ಶಾಲೆಯ ಸ್ಯಾಟ್ ಸಂಖ್ಯೆ ವಿದ್ಯಾರ್ಥಿಯ ಭಾವಚಿತ್ರ, ವಿದ್ಯಾರ್ಥಿ ಓದುತ್ತಿರುವ ಶಾಲೆಯ ಮುಖ್ಯ ಶಿಕ್ಷಕರ ಮೊಬೈಲ್ ನಂಬರ್, ವಿದ್ಯಾರ್ಥಿಯ ಜಾತಿ ಮತ್ತು ಆದಾಯ ದೃಢೀಕರಣ ಪತ್ರ ಪೋಷಕರ ಸರಿಯಾದ ಮೊಬೈಲ್ ನಂಬರ್, ವಾಸ ದೃಢೀಕರಣ ಪತ್ರ, ತಹಸೀಲ್ದಾರ ಅವರಿಂದ ಹಾಗೂ ಅಂಗವಿಕಲ ವಿದ್ಯಾರ್ಥಿಗಳಿಗೆ ಸಕ್ಷಮ ಪ್ರಾಧಿಕಾರದಿಂದ ನೀಡಿರುವ ಪ್ರಮಾಣ ಪತ್ರ ಅರ್ಜಿ ಸಲ್ಲಿಸುವ ಸಮಯದಲ್ಲಿ ದಾಖಲಿಸಬೇಕಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ನೋಡಲ್ ಅಧಿಕಾರಿ ಕೆಪಿ ಸಾಲಿಮಠ ಮೊ.ಸಂ. 8762487691 ಸಂಪರ್ಕಿಸಬಹುದಾಗಿದೆ.

# 8ನೇ ಆವೃತ್ತಿಯ 'ಪುಲಿಗೆರೆ ಉತ್ಸವ' ಇಂದಿನಿಂದ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಇನ್ಫೋಸಿಸ್ ಪ್ರತಿಷ್ಠಾನದ ಸಹಕಾರ ಹಾಗೂ ಭಾರತೀಯ ವಿದ್ಯಾಭವನ ಸಹಯೋಗದಲ್ಲಿ 8ನೇ ಆವೃತ್ತಿಯ 'ಪುಲಿಗೆರೆ ಉತ್ಸವ' ಫೆ.21ರಿಂದ 23ರವರೆಗೆ ಜರುಗಲಿದೆ.

ಫೆ.21ರಂದು 6 ಗಂಟೆಗೆ ಭಾರತೀಯ ವಿದ್ಯಾಭವನದ ಜಂಟಿ ನಿರ್ದೇಶಕಿ ನಾಗಲಕ್ಷ್ಮೀ ಕೆ.ರಾವ್ ಮತ್ತು ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಅತಿಥಿಗಳಾಗಿ ಇನ್ಫೋಸಿಸ್ ಪ್ರತಿಷ್ಠಾನದ ಸಿಎಸ್‌ಆರ್ ವಿಭಾಗದ ವ್ಯವಸ್ಥಾಪಕರಾದ ಪ್ರಶಾಂತ ಹೆಗಡೆ ಸೇರಿ ಹಲವರು ಆಗಮಿಸುವರು.


ಬೆಳಿಗ್ಗೆ 6ಕ್ಕೆ ಎಸ್.ಬಿ. ಭಜಂತ್ರಿ ಹಾಗೂ ಸಹ ಕಲಾವಿದರಿಂದ ಶಹನಾಯಿ ವಾದನ, ಬೆಳಿಗ್ಗೆ 7ಕ್ಕೆ ಪರಶುರಾಮ ಭಜಂತ್ರಿ ಸಹ ಕಲಾವಿದರಿಂದ ಸಂಗೀತ ಸೇವೆ ನಡೆಯಲಿದೆ. ಸಂಜೆ 4ಕ್ಕೆ ಸೋಮೇಶ್ವರನ ಪಲ್ಲಕ್ಕಿ ಉತ್ಸವ ಸಕಲ ವಾದ್ಯಮೇಳದೊಂದಿಗೆ ನೆರವೇರಲಿದೆ. ಸಂಜೆ 6ಕ್ಕೆ ಮೃತ್ಯುಂಜಯ ದೊಡ್ಡವಾಡ ಅವರಿಂದ ವಚನ, ಜನಪದ, ತತ್ವ ಪದಗಳ ಪ್ರಸ್ತುತಿ, 7ಕ್ಕೆ ಸಿದ್ಧಾಪುರದ ಕೊಳಗಿ ಕೇಶವ ಹೆಗಡೆ ತಂಡದಿಂದ ಯಕ್ಷಗಾನ, 8.30ಕ್ಕೆ ಹುಬ್ಬಳ್ಳಿಯ ಭಾಗ್ಯಶ್ರೀ ಗಾಳೆಮ್ಮ ತಂಡದಿಂದ ಜಾನಪದ ನೃತ್ಯ ಪ್ರದರ್ಶನಗೊಳ್ಳಲಿದೆ.

ಫೆ.22ರ ಉದಯರಾಗ ಕಾರ್ಯಕ್ರಮದಲ್ಲಿ ಬೆಳಿಗ್ಗೆ 6ಕ್ಕೆ ಗದುಗಿನ ರಾಜೀವ ಈಶ್ವರ ಹಿರೇಮಠ ಅವರಿಂದ ಸಿತಾರ್ ವಾದನ, 7ಕ್ಕೆ ಡಾ.ಶಿವಬಸಯ್ಯ ಗಡ್ಡದಮಠ ಮತ್ತು ಸಹ ಕಲಾವಿದರಿಂದ ಹಿಂದೂಸ್ತಾನಿ ಗಾಯನ, ಸಂಜೆ 6ಕ್ಕೆ ಅರ್ಚನಾ ಕಾಮತ್ ಮತ್ತು ತಂಡದಿಂದ ಹಿಂದೂಸ್ತಾನಿ ಗಾಯನ, 7ಕ್ಕೆ ಬೆಂಗಳೂರಿನ ಕೌಶಲ್ಯ ನಿವಾಸ್ ತಂಡದಿಂದ ನೃತ್ಯ ನಾಟಕ, ರಾತ್ರಿ 8.30ಕ್ಕೆ ಸ್ಥಳೀಯ ಕಲಾವಿದೆ ಭವ್ಯ ಕತ್ತಿ ತಂಡದಿಂದ ಭರತನಾಟ್ಯ ಪ್ರದರ್ಶನವಿದೆ ಎಂದು ಪ್ರಕಟಣೆ ತಿಳಿಸಿದೆ.

### ತೋಂಟದಾರ್ಯ ಮಠದಲ್ಲಿ ಜರುಗುವ ಅಂಗೈಕ್ಯ ಗುರುಗಳ 76ನೇ ಜಯಂತಿ ನಿಮಿತ್ತ ವಿಶೇಷ ಲೇಖನ

# ಭಾವೈಕ್ಯತೆಯ ಬೆಳಕು ಡಾ.ತೋಂಟದ ಸಿದ್ಧಲಿಂಗ ಶ್ರೀಗಳು

ಮಾನವ ಕೇವಲ ಮಾನವನಾಗಿ ಉಳಿದಿದ್ದ ದಿನಗಳು ಮುಗಿದುಹೋಗಿವೆ. ಈಗ ಮಾನವ ನಿರ್ದಿಷ್ಟ ಪಂಥದವನಾಗಿ, ಜಾತಿ–ಧರ್ಮದವನಾಗಿ, ವರ್ಗ–ವರ್ಣದವನಾಗಿ ಗುರುತಿಸಿಕೊಳ್ಳುವ ಸಂಕ್ರಮಣ ಕಾಲ. ಮಾನವನನ್ನು ಸಂಕುಚಿತ ಗುಂಪುಗಳಲ್ಲಿ ಬಂಧಿಸುವ ವಿಚ್ಛಿದ್ರಕಾರಿ ಶಕ್ತಿಗಳು ದಿನಗಳು ಉರುಳಿದಂತೆ ಹುಲುಸಾಗಿ ಬೆಳೆಯುತ್ತಿರುವ ವಿಷಮ ಸ್ಥಿತಿಯಲ್ಲಿ ಮಾನವರ ನಡುವಿನ ಬಾಂಧವ್ಯ ಬೆಸೆಯುವ ಮಹತ್ವದ ಕೊಂಡಿಯಾಗಿ ಭಾವೈಕ್ಯತೆಯು ನಮ್ಮನ್ನು ಈಗಲೂ ಆಶಾದಾಯಕರನ್ನಾಗಿಸಿದೆ.



ಭಾವೈಕ್ಯತೆಯ ಕೃಷಿಯಿಂದ ಸಮಾಜದಲ್ಲಿ ಐಕ್ಯತಾ ಮನೋಭಾವವನ್ನು ವೃದ್ಧಿಸಬೇಕಿದೆ. ಈ ನಿಟ್ಟಿನಲ್ಲಿ ಗದುಗಿನ ಲಿಂಗೈಕ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಕ್ರಮಿಸಿದ ಹಾದಿ ಇಂದು–ಮುಂದೆಂದೂ ಸಮಾಜಕ್ಕೆ ಮಾರ್ಗದರ್ಶಿ ಮೈಲುಗಲ್ಲಾಗಿರಲಿದೆ ಎನ್ನುವುದು ಸಂದೇಹರಹಿತ ಸತ್ಯ. ಮಠಗಳು ಧರ್ಮಗಳ ಚೌಕಟ್ಟಿನಲ್ಲಿ ಕಾರ್ಯ ನಿರ್ವಹಿಸುತ್ತವೆ. ಒಂದು ವರ್ಗದ ಜನರಿಗೆ ಮಾತ್ರ ಅವುಗಳ ಕಾರ್ಯವ್ಯಾಪ್ತಿ ಸೀಮಿತ ಎನ್ನುವ ಸಿದ್ಧಸೂತ್ರ ಹಿಂದೆ ಜಾರಿಯಲ್ಲಿತ್ತು. ಆದರೆ ಶ್ರೀಗಳು ಪೀಠಾರೋಹಣಗೈದನಂತರ ಅವರ ಸಮಾಜಮುಖಿ ಕಾರ್ಯಚಟುವಟಿಕೆಗಳಿಂದ ಅಂಥ ಸೀಮಿತ ಧಾರ್ಮಿಕ ಸೂತ್ರಗಳನ್ನು ಕಿತ್ತೆಸೆದು ಸರ್ವ ಜನಾಂಗದ ಶಾಂತಿಯ ತೋಟವನ್ನು ಪೋಷಿಸಲು ಪ್ರಾರಂಭಿಸಿದರು.

1974ರಲ್ಲಿ ಎಡೆಯೂರು, ಡಂಬಳ–ಗದಗ ಮಠದ ಪೀಠಾಧಿಪತಿಗಳಾಗಿ ಬಂದಾಗ ಡಂಬಳಮಠ ತನ್ನ ಅಸ್ತಿತ್ವವನ್ನು ಕಳೆದುಕೊಳ್ಳುವ ಹಂತಕ್ಕೆ ತಲುಪಿತ್ತು. ಸುಮಾರು 60 ವರ್ಷಗಳ ಕಾಲದಿಂದ ಶ್ರೀಮಠದ ಸ್ಥಿತಿ ಹಾಳು ಹಂಪಿಯಂತೆ ಒಂದು ಕಾಲಕ್ಕೆ ಮೈಸೂರು ಮಹಾರಾಜರ ಸಂಸ್ಥಾನಕ್ಕೆ ಸಮವಾಗಿದ್ದ, ಲಿಂಗಾಯತರ ತಿರುಪತಿ ಎಂದು ಕರೆಸಿಕೊಳ್ಳುತ್ತಿದ್ದ ಈ ಮಠಕ್ಕೆ ಶ್ರೀಗಳು ಬಂದಾಗ ಒಬ್ಬ ವ್ಯಕ್ತಿಗೆ ಒಂದು ಹೊತ್ತಿನ ಊಟ ಕೊಡದಂತಹ ದಯನೀಯ ಸ್ಥಿತಿಗೆ ಬಂದು ತಲುಪಿತ್ತು. ಕರ್ತೃ ಗದ್ದುಗೆಯಲ್ಲಿ ಒಂದು ಲೈಟ್ ಬಿಟ್ಟರೆ ಎರಡನೆಯ ಲೈಟ್ ಸಹ ಇರಲಿಲ್ಲ. ಅಂತಹ ಸಂದರ್ಭದಲ್ಲಿ ಶ್ರೀಗಳು ಕಾರ್ತಿಕದ ಕತ್ತಲಲ್ಲಿ ಆಕಾಶದೀಪದಂತೆ ಈ ಮಠಕ್ಕೆ ಬಂದರು.

ಬಸವಣ್ಣನವರ ಕಾಯಕ, ದಾಸೋಹ, ಸಮಾನತೆ ತತ್ವವನ್ನು ಅಕ್ಷರಶಃ ತಮ್ಮ ಜೀವನದಲ್ಲಿ ಅಳವಡಿಸಿಕೊಂಡಿದ್ದ ಶ್ರೀಗಳು ತಮ್ಮನ್ನು ಶ್ರೀಗಂಧದಂತೆ ಸಮಾಜಕ್ಕೆ ಸವಿಸಿಕೊಂಡು ಸುಗಂಧ ಬೀರಿದರು. ಅವರು ಡಂಬಳದಲ್ಲಿ ದ್ರಾಕ್ಷಿ ದಾಳಿಂಬಿ, ಬಾಳೆ, ತೆಂಗಿ ಇವುಗಳನ್ನು ಮೊದಲ ಬಾರಿಗೆ ಈ ಭಾಗದಲ್ಲಿ ಬೆಳೆದರು. ಬಡ ವಿದ್ಯಾರ್ಥಿಗಳಿಗೆ ಬೋರ್ಡಿಂಗ್ ಪ್ರಾರಂಭಿಸಿದರು. ಶ್ರೀಗಳು ಎಂದೂ ತಮ್ಮ ತುಲಾಭಾರ ಮಾಡಿಸಿಕೊಳ್ಳಲಿಲ್ಲ, ಹುಟ್ಟುಹಬ್ಬ ಆಚರಿಸಿಕೊಳ್ಳಲಿಲ್ಲ. ಆ ಜಾತಿ–ಈ ಜಾತಿ ಅನ್ನಲಿಲ್ಲ. ಬರೀ ಪೂಜೆ, ಮಂತ್ರ, ಪ್ರಸಾದ ಮಾಡಿ ಕೈಕಟ್ಟಿ ಕೂಡಲಿಲ್ಲ. ತಳಹಂತದಿಂದ ಕೃಷಿಕಾಯಕ ಮಾಡಿ ಶ್ರೀಮಠವನ್ನು ಕಟ್ಟಿ ಬೆಳೆಸಿದರು.

ಅಡಿಗೆ ಮಾಡಿ ಭಕ್ತರಿಗೆ, ವಿದ್ಯಾರ್ಥಿಗಳಿಗೆ ಉಣಬಡಿಸಿದ ತಾಯಿಯಾದರು. ಭಕ್ತರು, ವಿದ್ಯಾರ್ಥಿಗಳು ಉಂಡು ಉಳಿದರೆ ತಾವು ಉಂಡರು. ಅವರು ವಿರಳರಲ್ಲಿ ವಿರಳರು, ಡಂಬಳ, ಗದಗ, ಎಡೆಯೂರು, ಹಾವೇರಿ, ಕಗ್ಗೆರೆಗಳಲ್ಲಿ ಶ್ರೀಗಳು ದಾಸೋಹದ ಮಹಾಮನೆಗಳನ್ನು ಪ್ರಾರಂಭಿಸಿ ಮುನ್ನಡೆಸಿದರು. ದಾಸೋಹದಲ್ಲಿ ಭಕ್ತರು ಹೆಚ್ಚು ಊಟ ಮಾಡಿದಷ್ಟು ಅವರಿಗೆ ಬಹಳ ಸಂತೋಷವಾಗುತಿತ್ತು. ಅದಕ್ಕೆ ಸಾಕ್ಷಿಯೆಂಬಂತೆ ಇಂದು ಎಡೆಯೂರು ದಾಸೋಹದಲ್ಲಿ ಒಂದೊಂದು ದಿನ ಐವತ್ತು ಸಾವಿರಕ್ಕೂ ಅಧಿಕ ಜನ ಪ್ರಸಾದ ಸ್ವೀಕರಿಸುತ್ತಾರೆ.

ಸಮಾನತೆಗೆ ಹೆಸರಾಗಿದ್ದ ಶ್ರೀಗಳು ಮಠದ ಬಾಗಿಲನ್ನು ಎಲ್ಲರಿಗೂ ಮುಕ್ತಗೊಳಿಸಿ ಮಠವನ್ನು ಸರ್ವಜನಾಂಗದ ಶಾಂತಿಯ ತೋಟವನ್ನಾಗಿಸಿದರು. ಮೊದಲು ಜಾತ್ರೆಗಳು ಮೂಢನಂಬಿಕೆಗಳ, ಕಂದಾಚಾರಗಳ ಪ್ರದರ್ಶನಕ್ಕೆ ಹೆಸರಾಗಿದ್ದವು. ಇವುಗಳಿಗೆ ತಿಲಾಂಜಲಿ ನೀಡಿ 1976ರಲ್ಲಿ ನಾಡಿನಲ್ಲಿ ಭಾವೈಕ್ಯತೆಗಾಗಿ ಮೊಟ್ಟಮೊದಲು ರೊಟ್ಟಿ ಜಾತ್ರೆಯನ್ನು ಡಂಬಳದಲ್ಲಿ ಪ್ರಾರಂಭಿಸಿದರು. ಈ ರೊಟ್ಟಿ ಜಾತ್ರೆಯಲ್ಲಿ ಎಲ್ಲ ಜನಾಂಗದ ಭಕ್ತರು ಪಾಲ್ಗೊಂಡು ಮಠದ ಆವರಣದಲ್ಲಿ ಸಾಮೂಹಿಕವಾಗಿ ಪಂಕ್ತಿ ಭೇದವಿಲ್ಲದೆ ಪ್ರಸಾದ ಸ್ವೀಕರಿಸುವ ವಿನೂತನ ಪದ್ಧತಿ ಜಾರಿಗೆ ತಂದು ಜಾತಿ ವ್ಯವಸ್ಥೆಯ ನಿರ್ಮೂಲನೆಗೆ ಪಣತೊಟ್ಟರು. ಆ ಮೂಲಕ ಬಸವಣ್ಣನವರ ದಾಸೋಹ, ಮತ್ತು ಸಮಾನತೆ ತತ್ವವನ್ನು ಎತ್ತಿಹಿಡಿದು ಬದುಕಿನುದ್ದಕ್ಕೂ ಭಾವೈಕ್ಯತೆಯ ಬೆತ್ತವನ್ನು ಹಿಡಿದು ನಡೆದರು. ಅವರ ಹಾದಿಯಲ್ಲಿ ನಡೆದು ಬರುತ್ತಿರುವ ಪೂಜ್ಯ ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಲಿಂಗೈಕ್ಯ ಶ್ರೀಗಳ ವಿಚಾರಧಾರೆಗಳನ್ನು ಮುನ್ನಡೆಸಿಕೊಂಡು ಹೊರಟಿರುವುದು ಭಕ್ತರಿಗೆ ಸಂತಸದ ವಿಷಯ.

> ಮಠಕ್ಕೆ ಪಾದವಿರಿಸಿದ ಮರುಕ್ಷಣವೇ ಮಠದ ಮುಂಬಾಗಿಲಿನಲ್ಲಿದ್ದ 'ಲಿಂಗವಂತರಿಗೆ ಮಾತ್ರ ಪ್ರವೇಶ' ಎನ್ನುವ ಫಲಕವನ್ನು ಸಿದ್ಧಲಿಂಗ ಶ್ರೀಗಳು ತೆರವುಗೊಳಿಸಿದರು, ಅಲ್ಲಿಂದ ನಾಡಿನ ಧಾರ್ಮಿಕ–ಸಾಂಸ್ಕೃತಿಕ ಇತಿಹಾಸದಲ್ಲಿ ಹೊಸದೊಂದು ಕ್ರಾಂತಿಕಾರಿ ಶಕೆ ಆರಂಭವಾಯಿತು. 'ಇವನಾರವ ಇವನಾರವ ಎಂದೆನಿಸದಿರಯ್ಯಾ' ಎಂಬ ಬಸವ ವಾಣಿಯನ್ನೇ ತಮ್ಮ ನಡೆ–ನುಡಿಗಳ ಮೂಲಕ ಜೀವನದುದ್ದಕ್ಕೂ ಪುನರುಚ್ಚರಿಸಿದ ಶ್ರೀಗಳು ಮಠವನ್ನು ವರ್ಗ–ವರ್ಣ ರಹಿತ ಸಾಮಾಜಿಕ ಕೇಂದ್ರವನ್ನಾಗಿಸಿದರು. ಶ್ರೀಮಠದ ಮುಖವಾಣಿ ಶಿವಾನುಭವ ಕಾರ್ಯಕ್ರಮವನ್ನು ನಾಡಗೀತೆಯ ಆಶಯದಂತೆ ಹಿಂದೂ–ಕ್ರೈಸ್ತ ಮುಸಲ್ಮಾನ, ಸಿಖ್–ಪಾರಸೀ ಜೈನರುದ್ಯಾನವನ್ನಾಗಿಸಿದರು.

ಶ್ರೀಮಠದಿಂದ ರಾಷ್ಟ್ರದಲ್ಲೇ ಮೊದಲ ಬಾರಿಗೆ ಅಂಬೇಡ್ಕರ ಪುರಾಣ ಮುದ್ರಿಸಿ, ಪ್ರವಚನದ ಮೂಲಕ ಪುರಾಣದ ಸಾರವನ್ನು ಪ್ರಸರಣಗೊಳಿಸಿದರು. ಇದಲ್ಲದೇ ಬುದ್ಧ, ಸೇವಾಲಾಲ ಪುರಾಣಗಳನ್ನು ಮುದ್ರಿಸಿದರು. ಜಾತ್ರಾ ಸಮಿತಿಯಲ್ಲಿ ಪ್ರಥಮ ಬಾರಿಗೆ ಲಿಂಗಾಯತೇತರರನ್ನು ಸಮೀಕರಿಸಿಕೊಂಡ ಶ್ರೀಗಳು, ವರ್ಗ–ವರ್ಣ ಸೀಮೋಲ್ಲಂಘನೆಯ ಮೂಲಕ ಹೊಸ ಮನ್ವಂತರಕ್ಕೆ ನಾಂದಿ ಹಾಡಿದರು. ಭಾವೈಕ್ಯತೆಯನ್ನು ಬಿತ್ತಿ ಬೆಳೆದ ಶ್ರೀಗಳ ಸತ್ಕಾರ್ಯವನ್ನು ಗುರುತಿಸಿದ ಅಂದಿನ ಕೇಂದ್ರ ಸರ್ಕಾರ ರಾಷ್ಟ್ರೀಯ ಕೋಮು ಸೌಹಾರ್ದತಾ ಹಾಗೂ ಭಾವೈಕ್ಯತಾ ಪುರಸ್ಕಾರವನ್ನು ನೀಡಿ ಗೌರವಿಸಿತು. ತನ್ಮೂಲಕ ಶ್ರೀಗಳು ಇಡೀ ದಕ್ಷಿಣ ಭಾರತದಲ್ಲೇ ಈ ಪ್ರಶಸ್ತಿ ಸ್ವೀಕರಿಸಿದ ಮೊದಲಿಗರಾದರು.

ತೋಂಟದ ಶ್ರೀಗಳ ಜನ್ಮದಿನವನ್ನು ಭಾವೈಕ್ಯತಾ ದಿನವನ್ನಾಗಿ ಆಚರಿಸಬೇಕೆಂಬುದು ನಾಡಿನ ಲಕ್ಷಾಂತರ ಭಕ್ತಗಣದ ಭಿನ್ನಹವಾಗಿದೆ.

ಕೆಲವು ವರ್ಷಗಳ ಹಿಂದೆ ರಾಜ್ಯ ಸರ್ಕಾರ ಸಿದ್ಧಗಂಗಾ ಮಠದ ಲಿಂ. ಶಿವಕುಮಾರ ಶ್ರೀಗಳ ಜನ್ಮದಿನವನ್ನು 'ದಾಸೋಹ ದಿನ'ವನ್ನಾಗಿ ಆಚರಿಸಲು ನಿರ್ಣಯ ಕೈಕೊಂಡಿದ್ದು, ಸ್ವಾಗತಾರ್ಹವಾಗಿದೆ. ಅಂತೆಯೇ ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಜನ್ಮದಿನವನ್ನೂ ಕೂಡ ಭಕ್ತರ ಒತ್ತಾಸೆಯಂತೆ 'ಭಾವೈಕ್ಯತಾ ದಿನ'ವನ್ನಾಗಿ ಆಚರಿಸಿದರೆ ಈಗ ಕರ್ನಾಟಕದಲ್ಲಿ ಜಾತಿ ಮತ್ತು ಧರ್ಮಗಳ ಹೆಸರಿನಲ್ಲಿ ಉಂಟಾಗಿರುವ ಕಲುಷಿತ ವಾತಾವರಣವನ್ನು ತಿಳಿಗೊಳಿಸಿ ಐಕ್ಯತೆಯ ಸಮ ಸಮಾಜವನ್ನು ನಿರ್ಮಾಣ ಮಾಡಿ ಎಲ್ಲರೂ ಭಾವೈಕ್ಯತೆಯಿಂದ ಬದುಕಲು ಸಾಧ್ಯವಾಗುತ್ತದೆ. ಸರ್ಕಾರ ಶೀಘ್ರ ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಜಯಂತಿಯನ್ನು ಭಾವೈಕ್ಯತಾ ದಿನವನ್ನಾಗಿ ಆಚರಿಸಲು ನಿರ್ಧರಿಸಬೇಕಿದೆ.

**– ಕೊಟ್ರೇಶ ಮೆಣಸಿನಕಾಯಿ. ಅಡವಿಸೋಮಾಪೂರ.**

### ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ 76ನೇ ಜಯಂತಿ

# 'ಭಾವೈಕ್ಯತಾ ದಿನಾಚರಣೆ' ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ತ್ರಿವಿಧ ದಾಸೋಹಿಗಳು, ಕನ್ನಡದ ಕುಲಗುರುಗಳೆಂದೇ ಖ್ಯಾತರಾದ ಲಿಂ. ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ 76ನೇ ಜಯಂತಿ ಅಂಗವಾಗಿ ಭಾವೈಕ್ಯತಾ ದಿನಾಚರಣೆ, ಗ್ರಂಥ ಬಿಡುಗಡೆ ಹಾಗೂ ಸಂಮಾನ ಸಮಾರಂಭ ಫೆ.21ರಂದು ಬೆಳಿಗ್ಗೆ 10.30ಕ್ಕೆ ನಗರದ ತೋಂಟದಾರ್ಯ ಮಠದಲ್ಲಿ ಜರುಗಲಿದೆ.



ಬೆಳಿಗ್ಗೆ 8.30 ಗಂಟೆಗೆ ಭೀಷ್ಮಕೆರೆಯ ಮಹಾತ್ಮ ಬಸವೇಶ್ವರ ಪುತ್ಥಳಿಯಿಂದ ಶ್ರೀಮಠದ ವರೆಗೆ ಭಾವೈಕ್ಯತಾ ಯಾತ್ರೆ ಜರುಗಲಿದೆ. ಯಾತ್ರೆಯ ಉದ್ಘಾಟನೆಯನ್ನು ಮಾಜಿ ಶಾಸಕರಾದ ಡಿ.ಆರ್. ಪಾಟೀಲ ನೆರವೇರಿಸುವರು.

ಅಧ್ಯಕ್ಷತೆಯನ್ನು ಕಾನೂನು–ಸಂಸದೀಯ ಇಲಾಖೆ, ಪ್ರವಾಸೋದ್ಯಮ ಇಲಾಖೆ ಸಚಿವರಾದ ಎಚ್.ಕೆ. ಪಾಟೀಲ ವಹಿಸುವರು. ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರಾದ ಭೀಮವ್ವ ಶಿಳ್ಳೆಕ್ಯಾತರ ಅವರನ್ನು ಸಂಮಾನಿಸಲಾಗುವುದು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಸಂಸದರಾದ ಬಸವರಾಜ ಬೊಮ್ಮಾಯಿ, ರಮೇಶ ಜಿಗಜಿಣಗಿ, ಶಾಸಕರಾದ ಜಿ.ಎಸ್. ಪಾಟೀಲ, ಸಿ.ಸಿ. ಪಾಟೀಲ, ಡಾ.ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ, ಉಪವಿಭಾಗಾಧಿಕಾರಿಗಳಾದ ಮಹೇಶ ಮಾಲಗಿತ್ತಿ, ಸಾಹಿತಿಗಳಾದ ರಂಜಾನ್ ದರ್ಗಾ, ವೈದ್ಯರಾದ ಡಾ. ಸೊಲೊಮನ್, ಮಾಜಿ ಸಚಿವರಾದ ಎಸ್.ಎಸ್. ಪಾಟೀಲ, ಕಳಕಪ್ಪ ಬಂಡಿ, ಮಾಜಿ ಸಂಸದರಾದ ಐ.ಜಿ. ಸನದಿ, ಮಾಜಿ ಶಾಸಕರಾದ ಜಿ.ಎಸ್. ಗಡ್ಡದ್ದೇವರಮಠ, ರಾಮಕೃಷ್ಣ ದೊಡ್ಡಮನಿ ಆಗಮಿಸುವರು. ಲಿಂಗೈಕ್ಯ ಗುರುಗಳ ಕುರಿತಾದ ಭೋಜರಾಜ ಸೊಪ್ಪಿಮಠ ವಿರಚಿತ 'ಕರುಣಾಮಯಿ ಭಾಗ–3' ಹಾಗೂ ಡಾ. ಮಂಜುನಾಥ ಬಮ್ಮನಕಟ್ಟಿ ವಿರಚಿತ ಗೋಕಾಕ ಚಳುವಳಿ ಮತ್ತು ಕನ್ನಡ ಅಭಿವೃದ್ಧಿ ಗ್ರಂಥಗಳು ಲೋಕಾರ್ಪಣೆಗೊಳ್ಳುವವು.

> ಭಾವೈಕ್ಯತಾ ಯಾತ್ರೆಯ ನಂತರ ಶ್ರೀಮಠದಲ್ಲಿ ಜರುಗುವ ವೇದಿಕೆ ಕಾರ್ಯಕ್ರಮದ ಸಾನ್ನಿಧ್ಯವನ್ನು ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸುವರು. ವಿಧಾನ ಪರಿಷತ್ ಸಭಾಪತಿಗಳಾದ ಬಸವರಾಜ ಹೊರಟ್ಟಿ ಘನ ಉಪಸ್ಥಿತಿ ವಹಿಸುವರು. ನಿಜಗುಣಪ್ರಭು ತೋಂಟದಾರ್ಯ ಶ್ರೀಗಳು, ಭೈರನಟ್ಟಿ–ಶಿರೋಳದ ಶಾಂತಲಿಂಗ ಶ್ರೀಗಳು, ಸಂಡೂರು ವಿರಕ್ತಮಠದ ಪ್ರಭು ಶ್ರೀಗಳು, ಅರಸಿಕೆರೆಯ ಶಾಂತಲಿಂಗ ದೇಶಿಕೇಂದ್ರ ಶ್ರೀಗಳು, ಕೋರಣೇಶ್ವರ ಶ್ರೀಗಳು ಸಮ್ಮುಖ ವಹಿಸುವರು.

ಈ ಕಾರ್ಯಕ್ರಮಕ್ಕೆ ಡಾ. ತೋಂಟದ ಸಿದ್ಧಲಿಂಗ ಶ್ರೀಗಳ ಅಭಿಮಾನಿಗಳು ಮತ್ತು ಶ್ರೀಮಠದ ಸದ್ಭಕ್ತರು ಆಗಮಿಸಬೇಕೆಂದು ಶ್ರೀಮಠದ ಆಡಳಿತಾಧಿಕಾರಿಗಳಾದ ಪ್ರೊ. ಶಿವಾನಂದ ಪಟ್ಟಣಶೆಟ್ಟರ ಪತ್ರಿಕಾ ಪ್ರಕಟಣೆಯ ಮೂಲಕ ಕೋರಿದ್ದಾರೆ.

### ಶ್ರೀದುರ್ಗಾದೇವಿ ಶಿಕ್ಷಣ ಸಮಿತಿಯಲ್ಲಿ ವೈಜ್ಞಾನಿಕ ಚಿಂತಕ ಡಾ. ಹುಲಿಕಲ್ ನಟರಾಜರಿಗೆ ಸನ್ಮಾನ

# ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ಶಾಲೆಗಳು ದೇವಾಲಯ ಇದ್ದಂತೆ. ಅಲ್ಲಿ ಹೆಚ್ಚು ಗಂಟೆ ಬಾರಿಸಿದರೆ ಅದರಲ್ಲಿನ ಧನಾತ್ಮಕ ಕಂಪನದಿಂದ ಹೆಚ್ಚು ಜ್ಞಾನಿಗಳು, ಪ್ರಜಾವಂತರು ಹುಟ್ಟಿಕೊಳ್ಳುತ್ತಾರೆ ಎಂದು ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ರಾಜ್ಯಾಧ್ಯಕ್ಷರು ಹಾಗೂ ಪವಾಡಗಳನ್ನು ಬಯಲು ಮಾಡುವ ವೈಜ್ಞಾನಿಕ ಚಿಂತಕರಾದ ಡಾ. ಹುಲಿಕಲ್ ನಟರಾಜ್ ಹೇಳಿದರು.

ನಗರದ ಗಂಗಾಪೂರ ಪೇಟೆಯಲ್ಲಿರುವ ಶ್ರೀದುರ್ಗಾದೇವಿ ಶಿಕ್ಷಣ ಸಮಿತಿಯಲ್ಲಿ ಸನ್ಮಾನ ಸ್ವೀಕರಿಸಿ, ವಿದ್ಯಾರ್ಥಿಗಳೊಂದಿಗೆ ಮಾತನಾಡಿದ ಅವರು, ಮಕ್ಕಳು ಅಪರಿಚಿತರು ನೀಡುವ ಚಾಕಲೇಟ್, ಪೇಪರ್, ಸಿಹಿ ತಿನಿಸು ಮತ್ತು ಲಿಂಬೆಹಣ್ಣಿನಂತಹ ಪದಾರ್ಥಗಳನ್ನು ತೆಗೆದುಕೊಳ್ಳಬಾರದು. ಏಕೆಂದರೆ ದುಷ್ಕರ್ಮಿಗಳು ಅಮಾಯಕ ಮಕ್ಕಳನ್ನು ಪುಸಲಾಯಿಸಿ ಅಹಿತಕರ ಘಟನಗಳಿಗೆ ಕಾರಣಗಳಾಗುತ್ತಾರೆ. ಅದ್ದರಿಂದ ಮಕ್ಕಳು ಪಾಲಕರು ಮತ್ತು ಶಿಕ್ಷಕರ ಮಾತುಗಳನ್ನು ಮಾತ್ರ ಕೇಳಬೇಕೆಂದು ಸಲಹೆ ನೀಡಿದರು.



ಮಕ್ಕಳಿಗೆ ಶಿಕ್ಷಣ ಹಾಗೂ ಸಂಸ್ಕಾರ ನೀಡುವುದು ದೇವರ ಕೆಲಸವಾಗಿದೆ. ಆ ಕಾಯಕವನ್ನು ಶ್ರೀ ದುರ್ಗಾದೇವಿ ಶಿಕ್ಷಣ ಸಂಸ್ಥೆಯ ನಡೆದುಕೊಂಡು ಬಂದಿರುವುದು ಶ್ಲಾಘನೀಯ. ಈ ಶಾಲೆಯಲ್ಲಿ ಮಕ್ಕಳು ಚೆನ್ನಾಗಿ ಓದಿ, ಉತ್ತಮ ಸಾಧನೆ ಮಾಡಿ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಂಡು ಶಾಲೆಯ ಹಾಗೂ ದೇಶದ ಆಸ್ತಿಯಾದರೆ ಅದಕ್ಕಿಂತ ದೊಡ್ಡ ಆಸ್ತಿ ಮತ್ತೊಂದಿಲ್ಲ ಎಂದರು.

ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿಯ ನಿರ್ದೇಶಕಿ ಕವಿತಾ ಇಮರಾಪೂರ ಮಾತನಾಡಿ, ಮಕ್ಕಳಿಗೆ ಇಂದಿನ ದಿನಗಳಲ್ಲಿ ವೈಜ್ಞಾನಿಕ ಮನೋಭಾವನೆ ಹೆಚ್ಚು ಮೂಡಿಸಬೇಕಿದೆ. ಮೂಡನಂಬಿಕೆಗಳನ್ನು ದೂರು ಮಾಡಿ ಮೂಲ ನಂಬಿಕೆಗಳಿಗೆ ಗೌರವ ಕೊಡಬೇಕಾಗಿದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪಡೆದ ಡಾ. ಹುಲಿಕಲ್ ನಟರಾಜ್ ಹಾಗೂ ದೇವಿಕಾ ನಟರಾಜ್ ದಂಪತಿಗಳಿಗೆ ಸಮಿತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ರೋಣ ತಾಲೂಕು ಅಧ್ಯಕ್ಷರಾದ ವಿರೇಶ ನೇಗಲಿ, ಲಕ್ಷ್ಮೇಶ್ವರ ತಾಲೂಕು ಅಧ್ಯಕ್ಷರಾದ ಕರಿಯಪ್ಪ ಶಿರಹಟ್ಟಿ, ಮುಂಡರಗಿ ತಾಲೂಕಿನ ನೂತನ ಅಧ್ಯಕ್ಷ ಗಂಗಾಧರ ಬಳಿಗಾರ, ರಮೇಶಗೌಡ್ರ ಪಾಟೀಲ, ನರಗುಂದ ತಾಲೂಕಾಧ್ಯಕ್ಷ ವಿನಾಯಕ ಶಾಲದಾರ, ಗಜೇಂದ್ರಗಡದ ವೀರಣ್ಣ ಮಳಗಿ, ವಿರೇಶ ಪವಾಡಿಶೆಟ್ಟರ, ಸಾಗರ ಹಾಗೂ ಶಾಲೆಯ ಸಲಹಾ ಸಮಿತಿಯ ಸದಸ್ಯರಾದ ಮುತ್ತು ಜಡಿ, ಮುಖ್ಯೋಪಾಧ್ಯಾಯರಾದ ಎಚ್.ಎಂ. ನದಾಫ್, ಸಹ ಶಿಕ್ಷಕಿಯರಾದ ಮಂಜುಳಾ ಹಿಡ್ಕಿಮಠ, ಸುಧಾ ತಿರಕಣ್ಣವರ, ರೇಖಾ ಅಂಗಡಿ, ಮಂಜುಳಾ ದಾಸರ, ರೂಪಾ ಅಸೂಟಿ ಮುಂತಾದವರು ಉಪಸ್ಥಿತರಿದ್ದರು.

> ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ಜಿಲ್ಲಾಧ್ಯಕ್ಷ ವಿಜಯಕುಮಾರ ಬಣಕಾರ ಮಾತನಾಡಿ, ಸಮಾಜದಲ್ಲಿ ಅಜ್ಞಾನದಿಂದಾಗಿ ಜಿಡ್ಡುಗಟ್ಟಿರುವ ಮೂಢನಂಬಿಕೆಗಳನ್ನು ಅಳಿಸಿ, ಜ್ಞಾನದಿಂದ ಸದೃಢ ಸಮಾಜ ಕಟ್ಟಲು ಎಲ್ಲರೂ ಶ್ರಮಿಸಬೇಕು. ಇಂದಿನ ಮಕ್ಕಳು ಮುಂದಿನ ದೇಶದ ಆಸ್ತಿಯಾಗಿರುವದರಿಂದ ಅವರಿಗೆ ಈಗಿನಿಂದಲೇ ಭವಿಷ್ಯದಲ್ಲಿ ಬೇಕಾಗುವ ಜ್ಞಾನವನ್ನು ನೀಡಬೇಕಾಗಿದೆ ಎಂದು ಹೇಳಿದರು.

**ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಆದ್ರಳ್ಳಿ ಗವಿಸಿದ್ದೇಶ್ವರ ಮಠದ ಡಾ. ಕುಮಾರ ಮಹಾರಾಜರು**

# ನಾಳೆ ಸೇವಾಲಾಲ್ ಮಹಾರಾಜರ 286ನೇ ಜಯಂತ್ಯುತ್ಸವ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಆದ್ರಳ್ಳಿ ಗ್ರಾಮದಲ್ಲಿ ಫೆ.22ರಂದು ಬೆಳಿಗ್ಗೆ 11.30ಕ್ಕೆ ಸೇವಾಲಾಲ್ ಮಹಾರಾಜರ 286ನೇ ಜಯಂತ್ಯುತ್ಸವವನ್ನು ವಿಶೇಷವಾಗಿ ಆಚರಿಸಲಾಗುತ್ತಿದೆ ಎಂದು ಆದ್ರಳ್ಳಿ ಗವಿಸಿದ್ದೇಶ್ವರ ಮಠದ ಡಾ. ಕುಮಾರ ಮಹಾರಾಜರು ಹೇಳಿದರು.

ಅವರು ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿ, ಅಗಡಿ ಅಕ್ಕಿಮಠದ ಗುರುಲಿಂಗ ಸ್ವಾಮೀಜಿ, ಕುಂದಗೋಳದ ಬಸವಣ್ಣಜ್ಜನವರು ಸಾನ್ನಿಧ್ಯ ವಹಿಸುವರು. ಜಿಲ್ಲಾ ಉಸ್ತುವಾರಿ ಸಚಿವರಾದ ಹೆಚ್.ಕೆ. ಪಾಟೀಲ, ಮಾಜಿ ಸಚಿವ ಬಿ. ಶ್ರೀರಾಮುಲು, ಪಿ. ರಾಜೀವ, ಬಸವರಾಜ ನಾಯಕ, ಶಾಸಕ ಡಾ. ಚಂದ್ರು ಲಮಾಣಿ, ಭರತ್ ಬೊಮ್ಮಾಯಿ, ಅರುಣಕುಮರ ಪೂಜಾರ, ಶಾರದಾ ಪೂರಿಯಾನಾಯಕ, ರಾಮಣ್ಣ ಲಮಾಣಿ, ಜಿ.ಎಸ್. ಗಡ್ಡದೇವರಮಠ, ಜಿ.ಎಂ. ಮಹಾಂತಶೆಟ್ಟರ, ರಾಮಕೃಷ್ಣ ದೊಡ್ಡಮನಿ, ಸುಜಾತ ದೊಡ್ಡಮನಿ, ಶ್ರೀರಾಮಸೇನೆಯ ರಾಜ್ಯಾಧ್ಯಕ್ಷ ಗಂಗಾಧರ ಕುಲಕರ್ಣಿ, ರಾಜ್ಯ ಪ್ರಧಾನ ಕಾರ್ಯದರ್ಶಿ ರಾಜು ಖಾನಪ್ಪನವರ ಸೇರಿ ಬೋವಿ, ಕೊರಮ, ಕೊರಚ ಇತರೇ ಲಿಂಗಾಯತ ಸಮಾಜದ ಜಿಲ್ಲಾ, ತಾಲೂಕು ಅಧ್ಯಕ್ಷರು, ಎಲ್ಲ ತಾಂಡಾಗಳ ಡಾವ್-ಕಾರಬಾರಿ ಸಮಾಜದ ಹಿರಿಯರು, ಯುವಕರು ಆಗಮಿಸುವರು. ಬಂಜಾರ್ ಗಾಯಕ ರಮೇಶ ಲಮಾಣಿ, ಮುತ್ತುರಾಜ ಜೀವಾ ಪಿ.ಎಸ್, ಶಂಕರನಾಯಕ (ಕವಿರಾಜ), ರಾಜೀವ ಬಂಡ್ರಿ ತಾಂಡಾ, ನೇಮಿರಾಜ ನಾಯಕ ಸೇರಿ ಹಲವರು ಆಗಮಿಸುವರು. ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಮಾಜದ ಸಾಧಕರನ್ನು ಸನ್ಮಾನಿಸಲಾಗುವುದು ಎಂದರು.

ಜಯಂತ್ಯುತ್ಸವದ ಬಳಿಕ ಸಮಾಜದವರನ್ನು ಒಗ್ಗೂಡಿ ಸರ್ವಾನುಮತದಿಂದ ಬಂಜಾರ್ ಸಮಾಜದ ಹೊಸ ತಾಲೂಕು ಸಂಘಟನೆ ಸೃಜಿಸಲಾಗುವುದು. ಆ ಮೂಲಕ ಸಮಾಜದ ಸಂಘಟನೆಗೆ ಒತ್ತು ಕೊಡಲಾಗುವುದು. ಬಂಜಾರ ಸಮಾಜ ಲವ್ ಜಿಹಾದ್, ಕ್ರೈಸ್ತ ಧರ್ಮಕ್ಕೆ ಮತಾಂತರಗೊಳ್ಳುವುದು ಸೇರಿ ಅನೇಕ ಸಮಸ್ಯೆಗಳ ಸುಳಿಯಲ್ಲಿ ಸಿಲುಕಿ ನೋವು-ಸಂಕಷ್ಟದಲ್ಲಿದೆ. ಆದರೆ ಈ ಬಗ್ಗೆ ಚಿಂತನೆ ಮಾಡಬೇಕಾದ ಸಮಜದ ಸಂಘಟನೆಯ ಜವಾಬ್ದಾರಿ ಹೊತ್ತವರು ವರ್ಷಕ್ಕೊಮ್ಮೆ ಹಣ ಸಂಗ್ರಹಿಸಿ ಸೇವಾಲಾಲ್ ಜಯಂತಿ ಮಾಡಿ ಕೈತೊಳೆದುಕೊಳ್ಳುತ್ತಿದ್ದಾರೆ. ತಮ್ಮ ವೈಯಕ್ತಿಕ ಲಾಭಕ್ಕಾಗಿ ಸಮಾಜವನ್ನು ಬಳಸಿಕೊಳ್ಳುತ್ತಿದ್ದು, ಸಮಾಜದ ಹೆಸರು ಕೆಡಿಸುತ್ತಿದ್ದಾರೆ.

ಈ ಬಗ್ಗೆ ಶಾಸಕರಿಗೆ, ಸಮಾಜದ ಹಿರಿಯರ ಗಮನಕ್ಕೂ ತಂದರೂ ಯಾವುದೇ ಪ್ರಯೋಜವಾಗಿಲ್ಲ. ಸಮಾಜ ಸಂಘಟನೆಯ ಜವಾಬ್ದಾರಿ ಹೊತ್ತಿರುವವರು ಈ ಬಗ್ಗೆ ಕಿಂಚಿತ್ತೂ ಗಮನಹರಿಸಿಲ್ಲ. ಸಂಘದ ನಿಯಮಾವಳಿಯನ್ನು ಗಾಳಿಗೆ ತೂರಿ ತಮ್ಮ ವೈಯಕ್ತಿಕ ದ್ವೇಷ, ಹಗೆ ಸಾಧಿಸಿಕೊಳ್ಳುತ್ತಿದ್ದಾರೆ. ಇದು ಸಮಾಜದ ಒಗ್ಗಟ್ಟು, ಸಂಘಟನೆ ದೃಷ್ಟಿಯಿಂದ ಸರಿಯಲ್ಲ. ಸರ್ವ ಸಮಾಜದ ಪ್ರೀತಿ, ವಿಶ್ವಾಸದೊಂದಿಗೆ ಸಮಾಜ ಬೆಳೆಯುವಂತಾಗಬೇಕು ಎಂದರು.

> 18 ವರ್ಷಗಳಿಂದ ಏಕಪಕ್ಷೀಯ ನಿರ್ಧಾರದೊಂದಿಗೆ ಕಾರ್ಯನಿರ್ವಹಿಸುತ್ತಿರುವ ಲಕ್ಷ್ಮೇಶ್ವರ ತಾಲೂಕು ಬಂಜಾರ್ ಸಂಘದ ಅಧ್ಯಕ್ಷ-ಉಪಾಧ್ಯಕ್ಷ ಮತ್ತು ಕಾರ್ಯದರ್ಶಿಗಳನ್ನೊಳಗೊಂಡ ತಾಲೂಕು ಕಮಿಟಿ ಬದಲಾಗಬೇಕು ಮತ್ತು ಶನಿವಾರ ಶಿರಹಟ್ಟಿ ನಡೆಯುತ್ತಿರುವ ತಾಲೂಕು ಮಟ್ಟದ ಸೇವಾಲಾಲ ಜಯಂತಿಗೆ ಜಿಲ್ಲಾ ಕಮಿಟಿ, ಸಮಾಜದ ಸ್ವಾಮಿಗಳು ಮತ್ತು ಅನೇಕ ಹಿರಿಯರನ್ನು ಪರಿಗಣಿಸಿಲ್ಲದ ಕಾರಣ ತಾವು ಆದ್ರಳ್ಳಿ ಗ್ರಾಮದಲ್ಲಿ ಎಲ್ಲರನ್ನೂ ವಿಶ್ವಾಸಕ್ಕೆ ಪಡೆದು ರಾಜ್ಯಮಟ್ಟದ ಸೇವಾಲಾಲ್ ಜಯಂತಿ ಆಚರಣೆಗೆ ಮುಂದಾಗಿದ್ದೇವೆ ಎಂದು ಶ್ರೀಗಳು ತಿಳಿಸಿದರು.

# ಶಿವಾಜಿ ಮಹಾರಾಜರು ಧೀಮಂತ ಯೋಧರು




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ವಡೆಯರ ಮಲ್ಲಾಪೂರ ಗ್ರಾಮದಲ್ಲಿ ಬುಧವಾರ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮವನ್ನು ಸರ್ವ ಧರ್ಮದವರು ಸೇರಿ ಆಚರಿಸಿದರು. ವಿವಿಧ ಸಮಾಜ ಬಾಂಧವರು ಇರುವ ಈ ಗ್ರಾಮದಲ್ಲಿ ಶಿವಾಜಿ ಎಲ್ಲ ಧರ್ಮಕ್ಕೆ ಸೇರಿದವರು ಎನ್ನುವ ನಿಟ್ಟಿನಲ್ಲಿ ಜ್ಯಾತ್ಯಾತೀತತೆಯ ದೃಷ್ಟಿಯಿಂದ ಜಯಂತಿ ಕಾರ್ಯಕ್ರಮ ಅದ್ದೂರಿಯಾಗಿ ನಡೆಸಿದ್ದು ಎಲ್ಲರ ಗಮನ ಸೆಳೆಯುವಂತಿತ್ತು.


ಇದೇ ಸಂದರ್ಭದಲ್ಲಿ ಶ್ರೀ ಛತ್ರಪತಿ ಶಿವಾಜಿ ಕ್ಷತ್ರಿಯ ಮರಾಠಾ ಸಮಾಜ ಸಂಘದ ಶಿವಾಜಿ ಸಮುದಾಯ ಭವನ ಉದ್ಘಾಟನೆಯನ್ನು ನೆರವೇರಿಸಿದ ಶಾಸಕ ಡಾ.ಚಂದ್ರು ಲಮಾಣಿ ಮಾತನಾಡಿ, ಛತ್ರಪತಿ ಶಿವಾಜಿ ಮಹಾರಾಜರು ಓರ್ವ ಧೀಮಂತ ಯೋಧರಾಗಿದ್ದರು. ಪಶ್ಚಿಮ ಭಾಗದಲ್ಲಿ ಮರಾಠಾ ಸಾಮ್ರಾಜ್ಯವನ್ನು ಸ್ಥಾಪಿಸಿದವರೂ ಇವರೇ. ಪ್ರತೀ ವರ್ಷ ಫೆಬ್ರವರಿ 19ನ್ನು ಛತ್ರಪತಿ ಶಿವಾಜಿ ಮಹಾರಾಜರ ಜನ್ಮ ದಿನವನ್ನಾಗಿ ಆಚರಿಸಲಾಗುತ್ತಿದ್ದು, ಅಂತಹ ಮಹಾನ್ ದೇಶಭಕ್ತ, ಅಪ್ರತಿಮ ಶೂರ ಶಿವಾಜಿ ಮಹಾರಾಜರ ಜಯಂತಿಯನ್ನು ಇಂತಹ ಸಣ್ಣ ಗ್ರಾಮದಲ್ಲಿ ಅದ್ದೂರಿಯಾಗಿ ನಡೆಸಿರುವದು ಶ್ಲಾಘನೀಯ ಎಂದರು.

ಸಮಾರಂಭದಲ್ಲಿ ಹತ್ತಿಮತ್ತೂರ ವಿರಕ್ತಮಠದ ಶ್ರೀ ನಿಜಗುಣ ಶಿವಯೋಗಿಗಳು ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಿವೃತ್ತ ಶಿಕ್ಷಕ ಮಂಜುನಾಥ ಡಂಬಳ ವಹಿಸಿದ್ದರು. ಶಂಕರ ಮರಾಠೆ, ಶರಣಬಸವ ಹವಾಲ್ದಾರ, ಅಣ್ಣಪ್ಪ ರಾಮಗಿರಿ, ಪದ್ಮರಾಜ ಪಾಟೀಲ, ಹೊನ್ನಪ್ಪ ಪಶುಪತಿಹಾಳ, ನಾಗರತ್ನ ಕಡಾರಿ, ರಾಮಣ್ಣ ಡಂಬಳ, ಎಂ.ಎಸ್. ಪಾಟೀಲ, ವೆಂಕಪ್ಪ ಬಡಿಗೇರ, ಈಶ್ವರ ಗದಗ, ಈಶ್ವರ ಲೋಂಡೆ, ಮಂಜುನಾಥ ಡಂಬಳ, ಪ್ರಭಾಕರ ಜಾಧವ, ಎಂ.ಎಸ್. ಡಂಬಳ, ವೆಂಕಟೇಶ ಬಡಿಗೇರ, ಬಸವರಾಜ ಡಂಬಳ, ಪರಮೇಶ್ವರ ಡಂಬಳ, ಮಹೇಶ ಡಂಬಳ, ವೀರಪ್ಪ ಬಡಿಗೇರ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು. ವಕೀಲ ಮಹೇಶ ಹಾರೋಗೇರಿ ಉಪನ್ಯಾಸ ನೀಡಿದರು.

ಇದಕ್ಕೂ ಮೊದಲು ಮುಂಜಾನೆ 8 ಗಂಟೆಗೆ ಪೂರ್ಣಕುಂಭ ಹಾಗೂ ಸಕಲ ವಾದ್ಯವೈಭವಗಳೊಂದಿಗೆ ಶಿವಾಜಿ ಮಹಾರಾಜರ ಬೃಹತ್ ಮೂರ್ತಿಯ ಮೆರವಣಿಗೆಯು ಗ್ರಾಮದ ಪ್ರಮುಖ ಭಾಗಗಳಲ್ಲಿ ಸಂಚರಿಸಿತು. ಪಿ.ಪಿ. ಗಾಯಕವಾಡ ಧ್ವಜಪೂಜೆ ನೆರವೇರಿಸಿದರು.

## ನಿಧನ

**ಚನ್ನಬಸಪ್ಪ ಕಲಕೇರಿ**



ಗದಗ: ತಾಲೂಕಿನ ಕುರ್ತಕೋಟಿ ಗ್ರಾಮದ ನಿವಾಸಿ ಚನ್ನಬಸಪ್ಪ ಸೋಮಪ್ಪ ಕಲಕೇರಿ (83) ಬುಧವಾರ ಸಾಯಂಕಾಲ ಶಿವಾಧೀನರಾದರು. ಮೃತರ ಅಂತ್ಯಕ್ರಿಯೆಯು ಗುರುವಾರ ಕುರ್ತಕೋಟಿ ಗ್ರಾಮದಲ್ಲಿ ನೆರವೇರಿತು.

**ಲಕ್ಷ ದೀಪೋತ್ಸವ ಸಮಾರಂಭವನ್ನು ಉದ್ಘಾಟಿಸಿದ ಶ್ರೀ ಕಲ್ಲಯ್ಯಜ್ಜನವರು**

# ವಿಶ್ವಕರ್ಮ ಸಮಾಜ ಪ್ರತಿಭಾ ಸಂಪನ್ನವಾಗಿದೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವಿಶ್ವಕರ್ಮ ಸಮಾಜದವರ ಕರಕುಶಲತೆಯು ಈ ಜಗತ್ತಿನಲ್ಲಿಯೇ ಅತ್ಯಂತ ಪ್ರಸಿದ್ಧವಾದುದು. ಅದಕ್ಕಾಗಿ ನಮ್ಮ ನಮನಗಳು ಎಂದು ಗದಗ ವೀರೇಶ್ವರ ಪುಣ್ಯಾಶ್ರಮದ ಶ್ರೀ ಕಲ್ಲಯ್ಯಜ್ಜನವರು ಹೇಳಿದರು.

ಪಟ್ಟಣದ ಶ್ರೀ ಕಾಳಿಕಾ ದೇವಿ ದೇವಸ್ಥಾನದ ಲಕ್ಷ ದೀಪೋತ್ಸವ ಸಮಾರಂಭವನ್ನು ಉದ್ಘಾಟಿಸಿ ಅವರು ಆಶೀರ್ವಚನ ನೀಡಿದರು.

ಬಾಗಿ ಬಂದವರನ್ನು ರಕ್ಷಿಸುವ, ಬೀಗಿ ಬಂದವರನ್ನು ಶಿಕ್ಷಕಿಸುವ ಕಾಳಿಕಾ ಮಾತೆಯನ್ನು ತಮ್ಮ ಕುಲ ಗುರುವಾಗಿ ಪಡೆದಿರುವ ವಿಶ್ವಕರ್ಮ ಸಮಾಜ ಅತ್ಯಂತ ಪ್ರತಿಭಾ ಸಂಪನ್ನ ಸಮಾಜವಾಗಿದೆ. ಅಜ್ಞಾನವನ್ನು ಹೊಡೆದೋಡಿಸಿ ಜ್ಞಾನವನ್ನು ಬೆಳಗಿಸುವ ಈ ಲಕ್ಷ ದೀಪೋತ್ಸವ ಕಾರ್ಯಕ್ರಮ ಯಶಸ್ವಿಯಾಗಲಿ ಎಂದು ಅವರು ಹಾರೈಸಿದರು.

ದೇವಿ ಆರಾಧನೆಯನ್ನು ಅತ್ಯಂತ ಶ್ರದ್ಧೆಯಿಂದ ಮಾಡಿದವರು ರಾಮಕೃಷ್ಣ ಪರಮಹಂಸರು. ಅವರು ಮಾಡಿದ ಕಾಳಿಕಾ ಮಾತೆಯ ಪೂಜೆಯು ವಿಶ್ವಕರ್ಮ ಸಮಾಜಕ್ಕೊಂದು ವರದಾನ. ಯುವ ಪೀಳಿಗೆ ವಿಶ್ವಕರ್ಮ ಸಂಸ್ಕೃತಿಯನ್ನು ಬೆಳೆಸಿಕೊಂಡು ಹೋಗಬೇಕು. ಹಿಂದೂ ಧರ್ಮದಲ್ಲಿ ದೀಪಾರಾಧನೆ



ಸಂಸ್ಕೃತಿಗೆ ವಿಶೇಷ ಮಹತ್ವವಿದೆ. ಈಗ ವಿಶ್ವಕರ್ಮ ಸಮಾಜದವರು ನೆರವೇರಿಸುತ್ತಿರುವ ದೀಪೋತ್ಸವದಿಂದ ಜಗತ್ತಿನ ಅಂಧಕಾರ ನಾಶವಾಗಲೆಂದು ಶ್ರೀಗಳು ಹಾರೈಸಿದರು.

ಧುರೀಣ ಮಿಥುನ್ ಪಾಟೀಲ ಮಾತನಾಡಿ, ಧಾರ್ಮಿಕ ಕಾರ್ಯಗಳಿಂದ ಮನಸ್ಸಿಗೆ ಶಾಂತಿ ಸಿಗುತ್ತದೆ. ಇಂತಹ ಕಾರ್ಯಗಳು ಮೇಲಿಂದ ಮೇಲೆ ಜರುಗುತ್ತಿದ್ದರೆ ಗ್ರಾಮಗಳು ಶಾಂತವಾಗಿರುತ್ತವೆ. ನರೇಗಲ್ಲದ ವಿಶ್ವಕರ್ಮ ಸಮಾಜ ಎಂದಿಗೂ ರಚನಾತ್ಮಕ ಕಾರ್ಯಗಳಿಗೆ ಮುಂದು ಎಂದರು.

ಜಗನ್ನಾಥ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಶಿವಶಕ್ತಿಯರ ಆರಾಧನೆ ಅನಾದಿ ಕಾಲದಿಂದಲೂ ಭಾರತದಲ್ಲಿ ನಡೆದು ಬಂದಿದೆ. ಈ ಆರಾಧನೆಯಿಂದ ಮನಸ್ಸಿಗೆ ಶಾಂತಿ, ಶಕ್ತಿ ದೊರಕುತ್ತದೆ. ನರೇಗಲ್ಲದ ವಿಶ್ವಕರ್ಮ ಸಮಾಜದವರು ಲಕ್ಷ ದೀಪೋತ್ಸವವನ್ನು ನೆರವೇರಿಸುವ ಮೂಲಕ ಉತ್ತಮ ಕಾರ್ಯ ಮಾಡಿದ್ದಾರೆ ಎಂದರು.

ಹೊಳೆಆಲೂರಿನ ಶ್ರೀ ಯಚ್ಚರೇಶ್ವರ ಮಹಾಸ್ವಾಮಿಗಳು, ಇಳಕಲ್ಲಿನ ಶ್ರೀ ವಿಶ್ವನಾಥ ಮಹಾಸ್ವಾಮಿಗಳು, ಶ್ರೀ ದಿವಾಕರ ಸ್ವಾಮೀಜಿ

> ನಿಡಗುಂದಿಕೊಪ್ಪದ ಅಭಿನವ ಚನ್ನಬಸವ ಸ್ವಾಮೀಜಿ ಆಶೀರ್ವಚನ ನೀಡಿ, ನಮಸ್ಕಾರ ಮಾಡುವ ಸಂಸ್ಕಾರವನ್ನು ಕಲಿಸಿಕೊಟ್ಟಿದ್ದೇ ಈ ಸಮಾಜ. ಇವರಿಂದ ನಿರ್ಮಾಣಗೊಂಡ ಅದೆಷ್ಟೋ ಕಲಾಕೃತಿಗಳು ಇಂದಿಗೂ ಈ ಜಗತ್ತಿನಲ್ಲಿ ತಮ್ಮ ಅಸ್ತಿತ್ವವನ್ನು ಕಾಯ್ದುಕೊಂಡಿವೆ. ಇಂತಹ ಸೇವೆ ಸಲ್ಲಿಸಿರುವ ಸಮಾಜಕ್ಕೆ ನಾವೆಂದಿಗೂ ಕೃತಜ್ಞರಾಗಿರಬೇಕೆಂದರು.

ಆಶೀರ್ವಚನ ನೀಡಿದರು. ಸಮಾರಂಭವನ್ನುದ್ದೇಶಿಸಿ ಭೀಮಸೇನ ಬಡಿಗೇರ, ಶಶಿಕಲಾ ಪಾಟೀಲ, ಅರುಣ ಕುಲಕರ್ಣಿ, ಶಿವನಗೌಡ ಪಾಟೀಲ, ದಾವೂದಲಿ ಕುದರಿ, ಕುಮಾರಸ್ವಾಮಿ ಕೋರಧಾನ್ಯಮಠ ಮಾತನಾಡಿದರು. ವೇದಿಕೆಯ ಮೇಲೆ ಕಲ್ಮೇಶ ತೊಂಡಿಹಾಳ, ರಾಮಣ್ಣ ನವಲಿ, ಶೇಕಪ್ಪ ಜುಟ್ಲ, ನಾರಾಯಣ ವಡ್ಡಟ್ಟಿ, ಅಲ್ಲಾಭಕ್ಷಿ ನದಾಫ್, ಸುನೀಲ ಬಸವರಡ್ಡೇರ ಇನ್ನೂ ಮುಂತಾದವರಿದ್ದರು. ಲಕ್ಷದೀಪೋತ್ಸವ ಸಮಿತಿ ಅಧ್ಯಕ್ಷ ಮೌನೇಶ ಹೊಸಮನಿ ಅಧ್ಯಕ್ಷತೆ ವಹಿಸಿದ್ದರು. ಸಿಂಧೂ ಪಾಟೀಲ ಮತ್ತು ದೃಷ್ಟಿ ಪತ್ತಾರರ ನೃತ್ಯ ಗಮನ ಸೆಳೆಯಿತು. ವಿಠ್ಠಲ ಪತ್ತಾರ ಸ್ವಾಗತಿಸಿದರು. ಸುರೇಶ ಪತ್ತಾರ ನಿರೂಪಿಸಿದರು.

# ಸಾರ್ವಜನಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯ ಸಾರ್ವಜನಿಕರಲ್ಲಿ ತಿಳಿಯಪಡಿಸುವುದೇನೆಂದರೆ , ಸರ್ಕಾರದ ಅಧಿಸೂಚನೆ ಅನ್ವಯ ನಗರಸಭೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಆಸ್ತಿಗಳಿಗೂ ಆಸ್ತಿ ತೆರಿಗೆಯನ್ನು ನಿರ್ಧರಣೆ ಗೊಳಸಿಕೊಂಡು ಇ-ಆಸ್ತಿ ಪಡೆದು ಕೊಳ್ಳುವುದು ಅವಶ್ಯವಿರುತ್ತದೆ.

ಈ ಸಂಬಂಧ ಕರ್ನಾಟಕ ಪುರಸಭಾ ಅಧಿನಿಯಮದಂತೆ ನಮೂನೆ 03 ಅಧಿಕೃತ ನಕಲುಗಳನ್ನು ಹಾಗೂ ರಿಜಿಸ್ಟರ್ ಬಿ (ನಮೂನೆ 3ಎ) ಅನಧಿಕೃತ ಸ್ವತ್ತುಗಳ ವಹಿಯನ್ನು ನಿರ್ವಹಿಸಬೇಕಾಗಿರುವದರಿಂದ ನಗರಸಭೆ ವ್ಯಾಪ್ತಿಯ ಎಲ್ಲಾ ಆಸ್ತಿಗಳ ಮಾಲೀಕರುಗಳು ಈ ಕೆಳಕಂಡ ದಾಖಲಾತಿಗಳನ್ನು ಮಾರ್ಚ್-2025 ರ ಅಂತ್ಯದೊಳಗೆ ಗದಗ-ಬೆಟಗೇರಿ ನಗರಸಭೆ ಕಚೇರಿಗೆ ಸಲ್ಲಿಸಬಹುದಾಗಿದೆ.

**ದಾಖಲಾತಿಗಳು** : ಮಾಲೀಕತ್ವ ದೃಢೀಕರಿಸುವ ನೋಂದಾಯಿತ ದಾಖಲೆ, ಸ್ವತ್ತಿನ ಋಣಭಾರ ಪ್ರಮಾಣ ಪತ್ರ (ನಮೂನೆ 15 ರಲ್ಲಿ) ಆಸ್ತಿ ತೆರಿಗೆ ಪಾವತಿಸಿದ ರಶೀದಿ, ಸರ್ಕಾರದಿಂದ ವಿತರಿಸಿದ ಯಾವುದೇ ಬಗೆಯ ಗುರುತಿನ ಚೀಟಿ (ಪ್ಯಾನ್ ಕಾರ್ಡ್/ ವೋಟರ್ ಐಡಿ), ಸ್ವತ್ತಿನ ಜಿ.ಪಿ.ಎಸ್ ಛಾಯಾಚಿತ್ರ, ಆಸ್ತಿ ಮಾಲೀಕರ ಫೋಟೋ

ಹೆಚ್ಚಿನ ಮಾಹಿತಿಗಾಗಿ ಕಚೇರಿ ಸಮಯದಲ್ಲಿ ಕಂದಾಯ ನಿರೀಕ್ಷಕರು ಅಥವಾ ಕಂದಾಯ ಅಧಿಕಾರಿಗಳನ್ನು ಅಥವಾ ಸಹಾಯವಾಣಿ: 08372 – 278504. ಸಂಪರ್ಕಿಸ 'ಬಹುದಾಗಿದೆ ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಮರ್ಥ್ಯದ ಆಧಾರದ ಮೇಲೆ ಸಾಲ ನೀಡಿ

▶▶ಮೊದಲನೇ ಪುಟದಿಂದ

ಯಾವುದೇ ಕಾರಣಕ್ಕೂ ಸಾಲ ತೀರುವಳಿಗಾಗಿ ಸಾಲಗಾರನಿಗರ ಅಥವಾ ಅವರ ಕುಟುಂಬಸ್ಥರಿಗೆ ಬಲವಂತದ ಕ್ರಮ ಕೈಗೊಳ್ಳದಂತೆ ತಿಳಿಸಿದ ಜಿಲ್ಲಾಧಿಕಾರಿ, ಆದ್ಯಾದೇಶವನ್ನು ಉಲ್ಲಂಘಿಸುವವರಿಗೆ ಹತ್ತು ವರ್ಷಗಳಿಗೆ ವಿಸ್ತರಿಸಬಹುದಾದ ಅವಧಿಯ ಜಾಮೀನು ರಹಿತ ಕಾರಾಗೃಹ ವಾಸದೊಂದಿಗೆ ಐದು ಲಕ್ಷ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ದಂಡನಗೊಳ ಪಡಿಸಲಾಗುವದು ಹಾಗೂ ತ್ರೈಮಾಸಿಕ ತಃಖ್ತೆ ಮತ್ತು ವಾರ್ಷಿಕ ತಃಖ್ತೆಯನ್ನು ಸಲ್ಲಿಸಲು ವಿಫಲವಾದ ಎಂಎಫ್.ಆಯ್ ಅಥವಾ ಸಾಲ ನೀಡಿಕೆ ಏಜೆನ್ಸಿ, ಲೇವಾದೇವಿದಾರನಿಗೆ ಆರು ತಿಂಗಳು ಜೈಲು ವಾಸ ಹಾಗೂ ಹತ್ತು ಸಾವಿರ ರೂಪಾಯಿಗಳಿಗೆ ವಿಸ್ತರಿಸಬಹುದಾದ ದಂಡನೆಗೊಳಪಡಿಸಲಾಗುವದು ಎಂದು ಜಿಲ್ಲಾಧಿಕಾರಿ ಸಿ.ಎನ್ ಶ್ರೀಧರ ವಿವರಿಸಿದರು. ಸಭೆಯಲ್ಲಿ ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರಾದ ಎಸ್.ಎಸ್. ಕಬಾಡಿ, ಲೀಡ್ ಬ್ಯಾಂಕ್ ಮ್ಯಾನೆಜರ್ ಸಂತೋಷ ಎಂ.ವಿ, ಆರ್.ಬಿ. ಆಯ್ ಮ್ಯಾನೇಜರ್ ಶೀಲಪ್ರಿಯ ಗೌತಮ ಸೇರಿದಂತೆ ಜಿಲ್ಲೆಯ ಸಾಲ ನೀಡಿಕೆ ಏಜೆನ್ಸಿ, ಎಂ.ಎಫ್.ಆಯ್ ಸಂಸ್ಥೆಗಳು, ಲೇವಾದೇವಿದಾರರು ಹಾಜರಿದ್ದರು.

**ಅಪಸ್ಮಾರ ದಿನಾಚರಣೆಯ ಜಾಗೃತಿ ಕಾರ್ಯಕ್ರಮದಲ್ಲಿ ಡಾ ರಾಜೇಂದ್ರ ಬಸರಿಗಿಡದ**

# ಅಪಸ್ಮಾರ ಖಾಯಿಲೆಯ ಮಿಥ್ಯೆಗಳನ್ನು ತಿರಸ್ಕರಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಅಪಸ್ಮಾರ ಖಾಯಿಲೆಯ ಕುರಿತು ಇರುವ ಮಿಥ್ಯೆಗಳನ್ನು ತಿರಸ್ಕರಿಸಿ ಸೂಕ್ತ ಮತ್ತು ವೈಜ್ಞಾನಿಕ ರೀತಿಯಲ್ಲಿ ಚಿಕಿತ್ಸೆಗೆ ಮುಂದಾಗಬೇಕು. ಅಪಸ್ಮಾರ ಖಾಯಿಲೆ ಎದುರಿಸುತ್ತಿರುವ ರೋಗಿಯ ಉಪಚಾರಕ್ಕೆ ಸಮಯೋಚಿತ ಕ್ರಮಗಳನ್ನು ಕೈಗೊಂಡರೆ ಅದನ್ನು ನಿಯಂತ್ರಣದಲ್ಲಿಡಬಹುದು ಎಂದು ಜಿಲ್ಲಾ ಕುಷ್ಟರೋಗ ನಿರ್ಮೂಲನಾಧಿಕಾರಿ ಡಾ. ರಾಜೇಂದ್ರ ಬಸರಿಗಿಡದ ಹೇಳಿದರು.

ಇಲ್ಲಿನ ಸಂಕನೂರು ನರ್ಸಿಂಗ್ ಕಾಲೇಜಿನಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾಸ್ಪತ್ರೆ, ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮದ ಅಡಿಯಲ್ಲಿ ಆಯೋಜಿಸಿದ್ದ ಅಂತಾರಾಷ್ಟ್ರೀಯ ಅಪಸ್ಮಾರ ದಿನಾಚರಣೆಯ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪಾರ್ಶ್ವವಾಯು, ಸ್ಮರಣ ಶಕ್ತಿ ಕಳೆದುಕೊಳ್ಳುವಿಕೆ, ತಲೆನೋವು ಮತ್ತು ಅಪಸ್ಮಾರದಂತಹ ನರಸಂಬಂಧಿ ಕಾಯಿಲೆಗಳ ಕುರಿತು ಜಾಗೃತಿ ಮತ್ತು ಚಿಕಿತ್ಸೆಯನ್ನು ನೀಡಲು ಕರ್ನಾಟಕ ರಾಜ್ಯ ಸರ್ಕಾರವು ನಿಮಾನ್ಸ್ ಸಹಯೋಗದಲ್ಲಿ ಕರ್ನಾಟಕ ಮೆದುಳು ಆರೋಗ್ಯ




ಉಪಕ್ರಮವನ್ನು ಜಾರಿಗೊಳಿಸಿದೆ. ಇದು ದೇಶದ ಮೊದಲ ಮೆದುಳು ಆರೋಗ್ಯ ಉಪಕ್ರಮವಾಗಿದೆ ಎಂದರು.

ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮದ ಗದಗ ಜಿಲ್ಲಾ ಸಂಯೋಜಕ ಮಾರುತಿ ಹರಿಕಂತ್ರ ಮಾತನಾಡಿ, ಕಭಿ ಕಾರ್ಯಕ್ರಮದ ಉದ್ದೇಶಗಳು, ಗದಗ ಜಿಲ್ಲೆಯಲ್ಲಿ ಕಭಿಯ ಚಟುವಟಿಕೆಗಳು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾಸ್ಪತ್ರೆಯ ಸಹಕಾರದಿಂದ ಸಾರ್ವಜನಿಕರಿಗೆ ಅಗತ್ಯ ಸೇವೆ ಸಲ್ಲಿಸುತ್ತಿರುವ ಕುರಿತು ವಿವರಿಸಿದರು. ಫಿಸಿಯೋಥೆರಪಿಸ್ಟ್ ಜಗನಾಥ ಪಟೇಲ್, ಅಪಸ್ಮಾರ ರೋಗದ ಲಕ್ಷಣ ಕಾರಣ ಮತ್ತು ಪರಿಣಾಮಗಳು ಹಾಗೂ ಚಿಕಿತ್ಸಾ ಕ್ರಮಗಳ ಬಗ್ಗೆ ಉಪನ್ಯಾಸ ನೀಡಿದರು.

> ಅಧ್ಯಕ್ಷತೆ ವಹಿಸಿ ಮಾತನಾಡಿದ ಕಾಲೇಜಿನ ಉಪಪ್ರಾಚಾರ್ಯ ಮತ್ತು ಆಡಳಿತಾಧಿಕಾರಿ ಡಾ. ವಿನ್ಸೆಂಟ್ ಪಾಟೀಲ್, ಮನುಷ್ಯನ ಸುಸ್ಥಿರ ಆರೋಗ್ಯಕ್ಕೆ ಮೆದುಳಿನ ಆರೋಗ್ಯ ಅತ್ಯಗತ್ಯವಾಗಿದೆ. ಆ ದಿಸೆಯಲ್ಲಿ ಮೆದುಳು ಆರೋಗ್ಯ ಉಪಕ್ರಮವು ಜಾರಿಯಾಗಿ ಮುನ್ನೆಚ್ಚರಿಕೆ ಮತ್ತು ಚಿಕಿತ್ಸೆಯ ಮೂಲಕ ಸಾರ್ವಜನಿಕ ಆರೋಗ್ಯದ ಉತ್ತಮ ಕಾರ್ಯಕ್ರಮವಾಗಿ ಮಾರ್ಪಟ್ಟಿದೆ. ಇಂದಿನ ಜೀವನಶೈಲಿಯಲ್ಲಿನ ಬದಲಾವಣೆಯಿಂದಾಗಿ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತಿದ್ದು, ಇಂತಹ ಕಾರ್ಯಕ್ರಮಗಳ ಮೂಲಕ ಜಾಗೃತಿ ಮೂಡಿಸುತ್ತಿರುವುದು ಶ್ಲಾಘನೀಯ ಎಂದರು.

ನರ್ಸಿಂಗ್ ಕಾಲೇಜಿನ ಹಿರಿಯ ಉಪನ್ಯಾಸಕಿ ಡಾ. ರಶ್ಮಿ ಡಿ.ಎಚ್, ಮಾನಸಿಕ ಆರೋಗ್ಯ ಕಾರ್ಯಕ್ರಮ ಮತ್ತು ಕರ್ನಾಟಕ ಮೆದುಳು ಆರೋಗ್ಯ ಕಾರ್ಯಕ್ರಮದ ಸಿಬ್ಬಂದಿ, ಕಾಲೇಜಿನ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಹಾಜರಿದ್ದರು. ಕಭಿ ತಂಡದ ನರ್ಸಿಂಗ್ ಅಧಿಕಾರಿ ರವಿ ನಂದ್ಯಾಳ ವಂದಿಸಿದರು.


**'ಯಶಸ್ಸಿನಡೆಗೆ ವಿದ್ಯಾರ್ಥಿಗಳ ನಡಿಗೆ' ಕುರಿತ ಕರಪತ್ರ ಬಿಡುಗಡೆ ಮಾಡಿದ ಪ್ರಾ.ಶಿವಾನಂದ ಪಟ್ಟಣಶೆಟ್ಟಿ**

# ಸಿದ್ಧಲಿಂಗನಗರ ಪ್ರೌಢಶಾಲೆ ಮಾದರಿಯಾಗಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆ ಸಭಾಪತಿ ಬಸವರಾಜ ಹೊರಟ್ಟಿಯವರ ನೆರವಿನಿಂದ ಕಳೆದ ಎರಡು ವರ್ಷಗಳಲ್ಲಿ ತನ್ನ ಕಳೆಯನ್ನು ಹೆಚ್ಚಿಸಿಕೊಂಡು ಖಾಸಗಿ ಶಾಲೆಗಳನ್ನು ಮೀರುವಂತೆ ಬೆಳೆದು ನಿಂತಿದೆ. ಇಲ್ಲಿನ ಶಾಲಾ ಆವರಣಕ್ಕೆ ಬಂದರೆ ಮಂದಿರ, ಮಸೀದಿ, ಚರ್ಚಗೆ ಬಂದಂತೆ ಆಗುತ್ತದೆ. ಅಂತಹ ವಾತಾವರಣವನ್ನು ಇಲ್ಲಿ ಕಂಡು ನಾನು ಮೂಕವಿಸ್ಮಿತನಾದೆ ಎಂದು ತೋಂಟದಾರ್ಯ ವಿದ್ಯಾಪೀಠದ ಆಡಳಿತಾಧಿಕಾರಿ ಶಿವಾನಂದ ಪಟ್ಟಣಶೆಟ್ಟಿ ಅಭಿಪ್ರಾಯಪಟ್ಟರು.

ಅವರು ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಯಲ್ಲಿ ಅವ್ವ ಸೇವಾ ಟ್ರಸ್ಟ್‌ನವರು ಪ್ರಕಟಿಸಿದ 'ಯಶಸ್ಸಿನಡೆಗೆ ವಿದ್ಯಾರ್ಥಿಗಳ ನಡಿಗೆ' ಕುರಿತ ಕರಪತ್ರ ಬಿಡುಗಡೆ ಮಾಡಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಸರಕಾರಿ ಪ್ರೌಢಶಾಲೆಗಳ ಸಂಖ್ಯೆ ಕಡಿಮೆಯಾಗುತ್ತಿವೆ. ಆದರೆ ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಯನ್ನು ನೋಡಿದಾಗಿ 450ಕ್ಕೂ ಹೆಚ್ಚು ಮಕ್ಕಳನ್ನು ಹೊಂದುವ ಮೂಲಕ ಎಲ್ಲ ಮೂಲಭೂತ ಸೌಕರ್ಯಗಳನ್ನು ಹೊಂದಿ ಹೈಟೆಕ್ ಸರಕಾರಿ ಶಾಲೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಜಿಲ್ಲೆಯಲ್ಲಿಯೇ ಒಂದು ಮಾದರಿ



ಪ್ರೌಢಶಾಲೆಯಾಗಿದೆ. ಈ ಎಲ್ಲ ಶ್ರೇಯಸ್ಸು ಸಭಾಪತಿ ಬಸವರಾಜ ಹೊರಟ್ಟಿಯವರಿಗೆ ಹಾಗೂ ಡಾ. ಬಸವರಾಜ ಧಾರವಾಡ ಅವರಿಗೆ ಸಲ್ಲಬೇಕು ಎಂದು ಹೇಳಿದರು. ಶಾಲಾ ದತ್ತು ಉಸ್ತುವಾರಿಯ ಮಾರ್ಗದರ್ಶಕರಾದ ಡಾ. ಬಸವರಾಜ ಧಾರವಾಡ ಮಾತನಾಡಿ, ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ವಿವಿಧ ಜನಪ್ರತಿನಿಧಿಗಳ ಮತ್ತು ಹಲವಾರು ದಾನಿಗಳ ಸಹಕಾರದಿಂದ ಈ ಶಾಲೆಯನ್ನು ಅತ್ಯಂತ ಕಡಿಮೆ ಅವಧಿಯಲ್ಲಿ ಅಭಿವೃದ್ಧಿಪಡಿಸಲು ಸಾಧ್ಯವಾಗಿದೆ. ಅವರ ಎಲ್ಲ ಸಹಕಾರವನ್ನು ನೆನೆಯುವುದಾಗಿ ಹೇಳಿದರು. ಅಕ್ಷರ ದಾಸೋಹದ ಸಹಾಯಕ ಅಧಿಕಾರಿಗಳಾದ ಶಂಕರ ಹಡಗಲಿ ಹಾಗೂ ಪ್ರಭಾರಿ ಮುಖ್ಯೋಪಾಧ್ಯಾಯರಾದ ಜಯಲಕ್ಷ್ಮೀ ಅಣ್ಣಿಗೇರಿ ಮುಂತಾದವರು ಮಾತನಾಡಿದರು. ಅಥಣಿ ಮೋಟಗಿ ಮಠದದವರು ಕೊಡಮಾಡುವ ಸಮಾಜಸೇವಾ ಭೂಷಣ ಪ್ರಶಸ್ತಿಗೆ ಪಾತ್ರರಾದ ಶಿವಾನಂದ ಪಟ್ಟಶೆಟ್ಟರ ಹಾಗೂ ಶಂಕರ ಹಡಗಲಿ ಅವರನ್ನು ಸನ್ಮಾನಿಸಲಾಯಿತು.

> ಕ್ಷೇತ್ರ ಶಿಕ್ಷಣಾಧಿಕಾರಿ ರವೀಂದ್ರ ಶೆಟ್ಟೆಪ್ಪನವರ ಮಾತನಾಡಿ, ಕಣ್ಣು ಚದುರಿದರೆ ಗುರಿ ಮಾತ್ರ ತಪ್ಪುತ್ತದೆ. ಆದರೆ ಮನಸ್ಸು ಚದುರಿದರೆ ಜೀವನದ ಹಾದಿ ತಪ್ಪುತ್ತದೆ. ಆ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಸ್ಪಷ್ಟ ಗುರಿಯೊಂದಿಗೆ ಅಧ್ಯಯನದ ಹಾದಿಯಲ್ಲಿ ಸಾಗಬೇಕು. ಇಲ್ಲಿ ಸುಂದರ ಕಲಿಕಾ ವಾತಾವರಣವಿದೆ. ಸ್ಪರ್ಧಾತ್ಮಕ ಪರೀಕ್ಷೆ ಬರೆದು ಆಯ್ಕೆಯಾದ ಶಿಕ್ಷಕವೃಂದ ಇದೆ. ಇದರ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆಯಬೇಕು ಎಂದರು.

ಈ ಸಂದರ್ಭದಲ್ಲಿ ಕ್ಷೇತ್ರ ಸಂಪನ್ಮೂಲ ಅಧಿಕಾರಿ ಶಾಮ ಲಾಂಡೆ, ಶಿಕ್ಷಣ ಸಂಯೋಜಕ ಆಯ್.ಬಿ. ಮಡಿವಾಳರ, ಶಂಕ್ರಮ್ಮ ಆರ್.ಹಣಮಗೌಡ್ರು, ಎಂ.ಐ. ಶಿವನಗೌಡ್ರು, ಮಂಜುಳಾ ಪಿ.ಸಾಮ್ರಾಣಿ, ಸುಮಂಗಲಾ ಎಂ.ಪತ್ತಾರ್, ಶಾರದಾ ಬಾಣದ, ಶೋಭಾ ಎಸ್.ಗಾಳಿ, ರಮೇಶ್ ಬಸರಿ, ಸಾವಿತ್ರಿ ಎ.ಗದ್ದನಕೇರಿ, ಎನ್.ಆರ್. ಶಿರೋಳ್, ಸಬಿಯಾ ಯು.ಕುಷ್ಟಗಿ, ಗಂಗಾ ಎಂ.ಅಳವಂಡಿ, ಮಂಜುಳಾ ಟಿ, ಪದ್ಮಾ ವಿ.ದಾಸರ್, ಲಕ್ಷ್ಮಮ್ಮ ಮಾಳೋತ್ತರ್, ಶಶಿಕಲಾ ಬಿ.ಗುಳೇದವರ, ಸಂಜೀವಿನಿ ಕೂಲಗುಡಿ ಮುಂತಾದವರು ಉಪಸ್ಥಿತರಿದ್ದರು. ಶಾರದಾ ಬಾಣದ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ನೇರ ಸಂದರ್ಶನ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಗದಗ ವತಿಯಿಂದ ನೇರ ಸಂದರ್ಶನವಿದ್ದು, ದಿ. 21-02-2025 ರಂದು ಬೆಳಿಗ್ಗೆ 10 ಗಂಟೆಗೆ ಕ್ರೆಡಿಟ್ ಎಕ್ಸೆಸ್ ಗ್ರಾಮೀಣ ಲಿಮಿಟೆಡ್ ಗದಗ ಮೊದಲನೆ ಮಹಡಿ ಯೂನಿಯನ್ ಬ್ಯಾಂಕ್ ಮೇಲುಗಡೆ ರಿಲಯನ್ಸ್ ಟ್ರೆಂಡ್ಸ್ ಹತ್ತಿರ ಮುಳಗುಂದ ರೋಡ್ ಗದಗ ಇಲ್ಲಿ ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ. ಈ ನೇರ ಸಂದರ್ಶನದಲ್ಲಿ ಈ ಕೆಳಗಿನ ಕಂಪನಿಗಳು ಭಾಗವಹಿಸಲಿದೆ. ಕ್ರೆಡಿಟ್ ಎಕ್ಸೆಸ್ ಗ್ರಾಮೀಣ ಲಿಮಿಟೆಡ್ (ಸೆಕ್ಯೂರಡ್ ಲೋನ್) ಗದಗ.

**ವಿದ್ಯಾರ್ಹತೆ** : ಪಿ,ಯು.ಸಿ ( 10+2), ಡಿಪ್ಲೋಮಾ ಮತ್ತು ಯಾವುದೇ ಪದವಿ

**ಹುದ್ದೆ** : ರಿಲೇಷನಶಿಪ್ ಆಫೀಸರ್ (ಮಾರ್ಡಗೇಜ್ ಲೋನ್) ಕಡ್ಡಾಯವಾಗಿ ದ್ವಿಚಕ್ರ ವಾಹನ ಹೊಂದಿರಬೇಕು.

**ವಯಸ್ಸು** : ಪುರುಷ 19 ರಿಂದ 29, ಮಹಿಳೆ 19 ರಿಂದ 35.

ನೇರ ಸಂದರ್ಶನದಲ್ಲಿ ಪಾಲ್ಗೊಳ್ಳುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಅಂಕಪಟ್ಟಿಗಳ ಝೆರಾಕ್ಸ್ ಪ್ರತಿಗಳು, 2 ರೆಸ್ಯೂಮೆ(ಬಯೋಡಾಟಾ)ಪ್ರತಿಗಳು, ಮತ್ತು ಆಧಾರ್ ಕಾರ್ಡ್ ಝೆರಾಕ್ಸ್‌ನೊಂದಿಗೆ ಭಾಗವಹಿಸಬಹುದು. ನೇರ ಸಂದರ್ಶನದಲ್ಲಿ ಭಾಗವಹಿಸಿದ ಅಭ್ಯರ್ಥಿಗಳಿಗೆ ನೋಂದಣಿ ಕಡ್ಡಾಯವಾಗಿರುತ್ತದೆ. ಹಾಗೂ ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ, 6363330688, 8762039729 ಕ್ಕೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ನೇರ ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ನೋಂದಣಿಯನ್ನು ನೇರ ಸಂದರ್ಶನದ ದಿನದಂದೇ ಮಾಡಿಸಬೇಕಾಗಿರುತ್ತದೆ.

### ಜಿಲ್ಲಾ ಮಟ್ಟದ ಉದ್ಯೋಗ ಮೇಳದ ಪೂರ್ವಸಿದ್ಧತಾ ಸಭೆಯಲ್ಲಿ ಡಿಸಿ ಸಿ.ಎನ್. ಶ್ರೀಧರ್

# ಉದ್ಯೋಗ ಮೇಳವನ್ನು ವ್ಯವಸ್ಥಿತವಾಗಿ ಜರುಗಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ



ಜಿಲ್ಲಾ ಮಟ್ಟದ ಉದ್ಯೋಗ ಮೇಳವನ್ನು ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಮಾರ್ಚ್ 1 ಮತ್ತು 2ರಂದು ಹಮ್ಮಿಕೊಳ್ಳಲಾಗಿದ್ದು, ವ್ಯವಸ್ಥಿತವಾಗಿ ಹಾಗೂ ಅಚ್ಚುಕಟ್ಟು ನಿರ್ವಹಣೆಗೆ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು. ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರೆದಿದ್ದ ಜಿಲ್ಲಾಮಟ್ಟದ ಉದ್ಯೋಗ ಮೇಳದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.

ಉದ್ಯೋಗ ಮೇಳದ ಯಶಸ್ವಿಗಾಗಿ ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು, ಆಯಾ ಸಮಿತಿಯ ಅಧಿಕಾರಿಗಳು ತಮಗೆ ವಹಿಸಿದ ಜವಾಬ್ದಾರಿಯನ್ನು ಅರಿತು ಉದ್ಯೋಗ ಮೇಳವನ್ನು ಯಶಸ್ವಿಗೊಳಿಸಬೇಕು. ಉದ್ಯೋಗ ಮೇಳ ಜರುಗುವ ಸ್ಥಳದ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಉದ್ಯೋಗ ಮೇಳದಲ್ಲಿ ಪಾಲ್ಗೊಳ್ಳುವ ಅಭ್ಯರ್ಥಿಗಳಿಗಾಗಿ ವಿವಿಧ ಮಳಿಗೆಗಳನ್ನು ತೆರೆಯಲಾಗುತ್ತಿದ್ದು, ಯಾವುದೇ ಗೊಂದಲ ಸೃಷ್ಟಿಯಾಗದಂತೆ ನೋಡಿಕೊಳ್ಳಬೇಕು. ಉದ್ಯೋಗ ಮೇಳದಲ್ಲಿ ಪಾಲ್ಗೊಳ್ಳುವವರಿಗೆ ಊಟ-ಉಪಹಾರದ ವ್ಯವಸ್ಥೆ, ಶುದ್ಧ ಕುಡಿಯುವ ನೀರು ಸೇರಿದಂತೆ ಮೂಲಭೂತ ಸೌಲಭ್ಯಗಳು ಹಾಗೂ ತುರ್ತು ಚಿಕಿತ್ಸೆಗಾಗಿ ಆಂಬುಲನ್ಸ್ ವ್ಯವಸ್ಥೆ ಇರುವಂತೆ ಸಂಬಂಧಿತ ಇಲಾಖೆಯ ಅಧಿಕಾರಿಗಳು ನೋಡಿಕೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸವರಾಜ ಕೊಟ್ಟೂರ, ಕೌಶಲ್ಯಾಭಿವೃದ್ಧಿ ಅಧಿಕಾರಿ ಬಸವರಾಜ ಮಲ್ಲೂರ, ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಅಧಿಕಾರಿ ಶರಣು ಗೋಗೇರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಎಸ್. ನೀಲಗುಂದ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ಹಾಜರಿದ್ದರು.

ಮಾರ್ಚ್ 1 ಮತ್ತು 2ರಂದು ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗುವ ಉದ್ಯೋಗ ಮೇಳದಲ್ಲಿ ಪ್ರತಿಷ್ಠಿತ ಕಂಪನಿಗಳು ನೋಂದಣಿ ಮಾಡಿಕೊಳ್ಳುತ್ತಿವೆ. ಸದರಿ ಕಂಪನಿಗಳು 6695 ಹುದ್ದೆಗಳಿಗೆ ಬೇಡಿಕೆ ಸಲ್ಲಿಸಿರುತ್ತಾರೆ. ಉದ್ಯೋಗ ಆಕಾಂಕ್ಷಿಗಳು ವೆಬ್‌ಸೈಟ್ ತಿತಿತಿ. ಉಂಆಂಉಂಉಎಔಃಈಂಖಖ.ಅಔಊ ಇಲ್ಲಿ ಅಥವಾ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡುವ ಮೂಲಕ ನೋಂದಾಯಿಸಿಕೊಳ್ಳಬೇಕು. ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗ ಮೇಳದಲ್ಲಿ ಪಾಲ್ಗೊಳ್ಳುವಂತೆ ಕ್ರಮ ವಹಿಸಬೇಕು. ಈ ಕುರಿತು ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

# ಸಿಎಂ ಪರಿಹಾರ ನಿಧಿಗೆ 1 ಕೋಟಿ ರೂ ದೇಣಿಗೆ




■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ಸರ್ಕಾರದ ಏಕೈಕ ಜಾಹೀರಾತು ಸಂಸ್ಥೆಯಾದ ಕರ್ನಾಟಕ ಸ್ಟೇಟ್ ಮಾರ್ಕೆಟಿಂಗ್ ಕಮ್ಯೂನಿಕೇಷನ್ ಅಂಡ್ ಅಡ್ವರ್ಟೈಸಿಂಗ್ ಲಿಮಿಟೆಡ್ ಕಂಪನಿಯ ಅಧ್ಯಕ್ಷರಾದ ಸತೀಶ್ ಕೃಷ್ಣ ಸೈಲ್ ಅವರು ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ಸಂಸ್ಥೆಯ ಆರ್ಥಿಕ ವರ್ಷ 2023-24ರ ಲಾಭಾಂಶದಿಂದ 1 ಕೋಟಿ ರೂಪಾಯಿ ದೇಣಿಗೆಯ ಚೆಕ್‌ನ್ನು ಗುರುವಾರ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ಎಂ.ಬಿ. ಪಾಟೀಲ ಅವರ ಸಮ್ಮುಖದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯರಿಗೆ ಹಸ್ತಾಂತರಿಸಿದರು.

ಸಂಸ್ಥೆಯು ಸಾಮಾಜಿಕ ಕಳಕಳಿ ಹೊಂದಿರುವ ದ್ಯೋತಕ ಇದಾಗಿದ್ದು,

ಕೆಎಸ್‌ಎಂಸಿಎ ಸಂಸ್ಥೆಯು ಆರ್ಥಿಕ ವರ್ಷ 2023-24ರ ಸಾಲಿನಲ್ಲಿ ರೂ.5.29 ಕೋಟಿಗಳ ಮೊತ್ತದ ಲಾಭಾಂಶವನ್ನು ಘೋಷಿಸಿದೆ. ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ಎಲ್. ಕೆ. ಅತೀಕ್, ಕೆಎಸ್‌ಎಂಸಿಎ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಮೊಹಮ್ಮದ್ ಅತೀಕುಲ್ಲಾ ಶರೀಫ್ ಮತ್ತು ಉಪ ಪ್ರಧಾನ ವ್ಯವಸ್ಥಾಪಕರಾದ ಪಿ.ಎಸ್. ನಂದೀಶ ಉಪಸ್ಥಿತರಿದ್ದರು.

### ಪತ್ರಿಕಾಗೋಷ್ಠಿಯಲ್ಲಿ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಮಾಹಿತಿ

# ಫೆ.24ರಂದು ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ

■ ವಿಜಯಸಾಕ್ಷಿ ಸುದ್ದಿ, ಗದಗ



ಸ್ಲಂ ಜನಾಂದೋಲನ ಕರ್ನಾಟಕ ಮತ್ತು ಸಾವಿತ್ರಿಬಾಯಿ ಫುಲೆ ಮಹಿಳಾ ಸಂಘಟನೆಯಿಂದ ಫೆ.24ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸ್ಲಂ ಜನರ ಮೇಲಿನ ಸಾಮಾಜಿಕ ಮತ್ತು ಅಭಿವೃದ್ಧಿ ತಾರತಮ್ಯ ವಿರೋಧಿಸಿ ಹಾಗೂ ಖಾಸಗಿ ಮಾಲೀಕತ್ವದ ಕೊಳಚೆ ಪ್ರದೇಶಗಳ ಘೋಷಣೆಗೆ ತೊಡಕಾಗಿರುವ ಸಂವಿಧಾನ ವಿರೋಧಿ ವಸತಿ ಇಲಾಖೆ ಸುತ್ತೋಲೆಯನ್ನು ತಕ್ಷಣ ಹಿಂಪಡೆಯಲು ಆಗ್ರಹಿಸಿ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಸ್ಲಂ ಜನಾಂದೋಲನ-ಕರ್ನಾಟಕ ರಾಜ್ಯ ಸಂಚಾಲಕ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್. ಮಾನ್ವಿ ಹೇಳಿದರು.

ಅವರು ನಗರದಲ್ಲಿ ಕರೆದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿ, 2025-26ನೇ ಸಾಲಿನ ಬಜೆಟ್‌ನಲ್ಲಿ ಸ್ಲಂ ಜನರ ಜನಸಂಖ್ಯೆಗೆ ಅನುಗುಣವಾಗಿ ಪಾಲು ನೀಡಬೇಕು. 2023ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ನೀಡಿರುವ ಭರವಸೆಗಳನ್ನು ಈಡೇರಿಸಲು ಒತ್ತಾಯಿಸಿ ಹಾಗೂ ಸ್ಲಂ ಜನರಿಗೆ ಪ್ರತ್ಯೇಕ ಸಚಿವಾಲಯ ಮತ್ತು ನಗರ ಉದ್ಯೋಗ ಖಾತ್ರಿ ಯೋಜನೆಯನ್ನು ಘೋಷಣೆ ಮಾಡಬೇಕು. ರಾಜ್ಯದ ನಿವೇಶನ ರಹಿತರಿಗೆ ವಸತಿ ಕಲ್ಪಿಸುವ ಲ್ಯಾಂಡ್ ಬ್ಯಾಂಕ್ ಯೋಜನೆಯನ್ನು ಜಾರಿಗೊಳಿಸುವುದು ಸೇರಿದಂತೆ ವಿವಿಧ ಹಕ್ಕೊತ್ತಾಯಗಳ ಈಡೇರಿಕೆಗೆ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗುತ್ತಿದೆ.

ರಾಜ್ಯದ ವಿವಿಧ ಜಿಲ್ಲೆಗಳಿಂದ 5 ಸಾವಿರಕ್ಕೂ ಹೆಚ್ಚು ಸ್ಲಂ ನಿವಾಸಿಗಳು ಪಾಲ್ಗೊಂಡು ವಸತಿ ಸಚಿವರ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸುವರು. ಸಂವಿಧಾನದ ಸಾಮಾಜಿಕ ಸಮಾನತೆ ಮತ್ತು ಸಾಮಾಜಿಕ ನ್ಯಾಯದ ಹಿನ್ನೆಲೆಯಲ್ಲಿ ಕೆಲಸ ಮಾಡುತ್ತಿರುವ ಕರ್ನಾಟಕ ಸರ್ಕಾರ ರಾಜ್ಯದ ಸ್ಲಂ ಜನರ ಪರವಾದ ಯೋಜನೆಗಳನ್ನು ಜಾರಿಗೆ ತಂದು ಅನುದಾನ ನೀಡಬೇಕೆಂದು ಆಗ್ರಹಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಗದಗ ಜಿಲ್ಲಾ ಸ್ಲಂ ಸಮಿತಿ ಪ್ರಧಾನ ಕಾರ್ಯದರ್ಶಿ ಅಶೋಕ ಕುಸಬಿ, ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಸ್ಲಂ ಸಮಿತಿ ಮುಖಂಡರಾದ ಇಬ್ರಾಹಿಂ ಮುಲ್ಲಾ, ಮೆಹಬೂಬಸಾಬ ಬಳ್ಳಾರಿ, ಮೌಲಾಸಾಬ ಗಚ್ಚಿ, ಖಾಜಾಸಾಬ ಇಸ್ಮಾಯಿಲನವರ, ಅಕಬರಸಾಬ ಡಂಬಳ, ಮಂಜುನಾಥ ಶ್ರೀಗಿರಿ ಮುಂತಾದವರು ಉಪಸ್ಥಿತರಿದ್ದರು.

### ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರ ಮೆರವಣಿಗೆಗೆ ಚಾಲನೆ ನೀಡಿದ ಅಭಿನವ ಚನ್ನಬಸವ ಶ್ರೀಗಳು

# ಕನ್ನಡ ಸೇವೆಯ ಅಭಿಲಾಷೆ ಈಡೇರಿದೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ನಮ್ಮ ಶ್ರೀಮಠದಲ್ಲಿ ಬಹಳ ದಿನಗಳಿಂದಲೂ ಕನ್ನಡ ಸೇವೆಯನ್ನು ಮಾಡುವ, ಕನ್ನಡದ ಯಾವುದಾದರೊಂದು ಕಾರ್ಯಕ್ರಮವನ್ನು ಹಮ್ಮಿಕೊಳ್ಳಬೇಕೆಂಬ ಅಭಿಲಾಷೆ ನಮಗಿತ್ತು. ಅದಕ್ಕೆ ಈ ಸಾರೆಯ ಜಾತ್ರಾ ಮಹೋತ್ಸವದ ಸಂದರ್ಭದಲ್ಲಿ ಗಜೇಂದ್ರಗಡ ತಾಲೂಕಾ ಕನ್ನಡ ಸಾಹಿತ್ಯ ಸಮ್ಮೇಳನ ನಡೆಸುವ ಅವಕಾಶ ದೊರೆತಿರುವುದು ನಮ್ಮೆಲ್ಲ ಸದ್ಭಕ್ತರ ಸೌಭಾಗ್ಯ ಎಂದು ನಿಡಗುಂದಿಕೊಪ್ಪದ ಶ್ರೀ ಅಭಿನವ ಚನ್ನಬಸವ ಮಹಾಸ್ವಾಮಿಗಳವರು ಹೇಳಿದರು.

ನಿಡಗುಂದಿ ಗ್ರಾಮದ ಶ್ರೀ ಜೋಡು ಬಸವೇಶ್ವರ ದೇವಸ್ಥಾನದ ಬಳಿಯಲ್ಲಿ ಸಮ್ಮೇಳನದ ಸರ್ವಾಧ್ಯಕ್ಷರ ಮೆರವಣಿಗೆಗೆ ಚಾಲನೆ ನೀಡಿ ಅವರು ಆಶೀರ್ವಚನ ನೀಡಿದರು.

ಸರ್ವಾಧ್ಯಕ್ಷರಾಗಿ ಯಾರನ್ನು ಆಯ್ಕೆ ಮಾಡಬೇಕೆನ್ನುವ ವಿಚಾರ ಬಂದಾಗ ಮುನ್ನೆಲೆಗೆ ಬಂದ ಹೆಸರು ನಮ್ಮ ಗುರುಗಳಾದ ಎಂ.ಎ. ಹಿರೇವಡೆಯರದ್ದು. ವಯೋವೃದ್ಧರು, ಜ್ಞಾನವೃದ್ಧರಾದ ಅವರ ಆಯ್ಕೆ ಸೂಕ್ತ ಎಂದು ಎಲ್ಲರಿಗೂ ಅನ್ನಿಸಿದ್ದರಿಂದ ಅವರನ್ನು ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಯಿತು. ಇಂದು ನಮ್ಮ ಗುರುಗಳ ಮೆರವಣಿಗೆಗೆ ಚಾಲನೆ ನೀಡುವ ಸೌಭಾಗ್ಯ ನನ್ನದಾಗಿರುವುದು ನನಗೆ ಅತೀವ ಆನಂದವನ್ನುಂಟು ಮಾಡಿದೆ ಎಂದರು.

ನಿಡಗುಂದಿಯ ಪ್ರಮುಖ ಬೀದಿಗಳಲ್ಲಿ ಸರ್ವಾಧ್ಯಕ್ಷರ ಮೆರವಣಿಗೆಯು ಸಂಚರಿಸಿತು. ಹಿರೇಮಠದ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ, ನಾಡಿನ ಅನೇಕ ಶ್ರೀಗಳು, ಅಂದಪ್ಪ ಬಿಚ್ಚೂರ, ಪಿ.ಕೆ. ಕರಡಿ, ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ, ತಾಲೂಕಾಧ್ಯಕ್ಷ ಅಮರೇಶ ಗಾಣಿಗೇರ, ಹೋಬಳಿ ಘಟಕದ ಅಧ್ಯಕ್ಷ ಎಂ.ವಿ. ವೀರಾಪೂರ, ಜಗದೀಶ ಕರಡಿ, ಫಕೀರಪ್ಪ ಕುಕನೂರ, ವೀರನಗೌಡ ಪಾಟೀಲ, ಶಂಕ್ರಯ್ಯ ಹಿರೇಮಠ, ದರ್ಶನ ಡುಮ್ಮನವರ, ಸಂಗಯ್ಯ ಭೂಸನೂರಮಠ, ಪರಪ್ಪ ಅಣಗೌಡ್ರ, ರಮೇಶ ಅಣಗೌಡ್ರ, ಮಲ್ಲನಗೌಡ ಪಾಟೀಲ, ಶರಣಯ್ಯ ಮಠಪತಿ, ರಾಜು ಬಾಣದ, ಬಸವರಾಜ ಮಲೀನಕೊಪ್ಪ, ಕುಬೇರಪ್ಪ ಗಡಾದ ನರೇಗಲ್ಲ, ನಿಡಗುಂದಿಕೊಪ್ಪ, ಹಾಲಕೆರೆ, ಜಕ್ಕಲಿ ಮತ್ತಿತರ ಗ್ರಾಮಗಳ ಅನೇಕ ಸಾಹಿತ್ಯಾಸಕ್ತರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಧುರೀಣ ಮಿಥುನ್ ಪಾಟೀಲ ಮಾತನಾಡಿ, ಸಾಹಿತ್ಯ ಸಮ್ಮೇಳನಗಳು ವ್ಯಕ್ತಿಯ ವಿಕಸನಕ್ಕೆ ಸಹಾಯ ಮಾಡುತ್ತವೆ. ತಾಲೂಕಿನ ಹಿರಿಕಿರಿಯ ಸಾಹಿತಿಗಳು ಈ ಸಮ್ಮೇಳನದ ಲಾಭವನ್ನು ಪಡೆದುಕೊಂಡು ತಮ್ಮ ಪ್ರತಿಭೆಯನ್ನು ಹೊರ ಹಾಕಲು ಅನುಕೂಲವಾಗುತ್ತದೆ. ಇದರಿಂದ ನಮ್ಮ ತಾಲೂಕಿನಲ್ಲಿರುವ ಸಾಹಿತಿಗಳು ಯಾರು, ಉದಯೋನ್ಮುಖರು ಯಾರು ಎಂಬುದನ್ನು ಅರಿಯಲು ಸಹಾಯಕವಾಗುತ್ತದೆ ಎಂದರು.

# ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2024/25ನೇ ಸಾಲಿಗೆ ಸಫಾಯಿ ಕರ್ಮಚಾರಿಗಳ ನಿಯೋಜನೆ ನಿಷೇಧ ಹಾಗೂ ಪುನರ್ವಸತಿ ಕಾಯ್ದೆ 2013ರನ್ವಯ ಜಿಲ್ಲಾ ಮಟ್ಟದ ಜಾಗೃತಿ ಸಮಿತಿಯನ್ನು ರಚಿಸಲು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಜಿಲ್ಲಾ ಮಟ್ಟದ ಸಫಾಯಿ ಕರ್ಮಚಾರಿಗಳ ಜಿಲ್ಲಾ ಜಾಗೃತಿ ಸಮಿತಿ ಸದಸ್ಯರಾಗಲು ಬಯಸುವವರು ಸಫಯಿ ಕರ್ಮಚಾರಿಗಳ ಪುನರ್ವಸತಿಗಾಗಿ ಕೆಲಸ ಮಾಡುತ್ತಿರುವ ಸಂಘಟನೆಗಳಿಗೆ ಸೇರಿದ ಅಥವಾ ಜಿಲ್ಲಾ ಮಟ್ಟದಲ್ಲಿ ವಾಸಿಸುವ ಸಮುದಾಯಗಳನ್ನು ಪ್ರತಿನಿಧಿಸುತ್ತಿರುವ 4 ಜನ ಮೀರದಂತೆ ಸಾಮಾಜಿಕ ಕಾರ್ಯಕರ್ತರು, ಅವರಲ್ಲಿ ಇಬ್ಬರು ಮಹಿಳೆಯರು ಇರತಕ್ಕದ್ದು. ಒಟ್ಟು 4 ಜನ ಅಧಿಕಾರೇತರ ಸದಸ್ಯರನ್ನು ನಾಮನಿರ್ದೇನ ಮಾಡಲಾಗುವುದು. ಸದರಿ ಸಮಿತಿಗೆ ಸದಸ್ಯರಾಗಬಯಸುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಉಪನಿರ್ದೇಶಕರ ಕಛೇರಿ, ಸಮಾಜ ಕಲ್ಯಾಣ ಇಲಾಖೆ ಗದಗ ಇಲ್ಲಿ ಅರ್ಜಿ ನಮೂನೆಯನ್ನು ಪಡೆದು 25/02/2025ರ ಒಳಗಾಗಿ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಲು ಕೋರಲಾಗಿದೆ.

### ಎಫ್.ಎಂ. ಡಬಾಲಿ ಕಾಲೇಜಿನಲ್ಲಿ ಅಂತಾರಾಷ್ಟ್ರೀಯ ಸಾಮಾಜಿಕ ನ್ಯಾಯ ದಿನಾಚರಣೆ

# ಸಾಂವಿಧಾನಿಕ ಕರ್ತವ್ಯಗಳನ್ನು ಮರೆಯದಿರಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ತಾಲೂಕಾ ಕಾನೂನು ಸೇವಾ ಸಮಿತಿ, ವಕೀಲರ ಸಂಘ ಶಿರಹಟ್ಟಿ ಹಾಗೂ ಎಫ್.ಎಂ. ಡಬಾಲಿ ಪಿಯು ಕಾಲೇಜಿನ ಸಹಯೋಗದಲ್ಲಿ ಎಫ್. ಎಂ. ಡಬಾಲಿ ಕಾಲೇಜಿನಲ್ಲಿ ಅಂತಾರಾಷ್ಟ್ರೀಯ ಸಾಮಾಜಿಕ ನ್ಯಾಯ ದಿನಾಚರಣೆ ಆಚರಿಸಲಾಯಿತು.

ದಿವಾನಿ ನ್ಯಾಯಾಧೀಶರಾದ ಸತೀಶ್ ಎಂ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಮಾನವ ಹಕ್ಕುಗಳ ರಕ್ಷಣೆಯಲ್ಲಿ ಸಾಮಾಜಿಕ ನ್ಯಾಯವು ಅವಶ್ಯವಾಗಿದೆ. ಈ ದೇಶದ ಪ್ರತಿಯೊಬ್ಬ ಪ್ರಜೆಯೂ ಹಕ್ಕುಗಳನ್ನು ಪಡೆಯುವುದರ ಜೊತೆಗೆ ಸಾಂವಿಧಾನಿಕ ಕರ್ತವ್ಯಗಳನ್ನು ಮರೆಯಬಾರದು. ಯುವ ಜನಾಂಗ ಸರಿಯಾದ ತಿಳುವಳಿಕೆಯ ಮೂಲಕ ಸಾಮಾಜಿಕ ಬದ್ಧತೆಯೊಂದಿಗೆ ವ್ಯಕ್ತಿತ್ವ ನಿರ್ಮಾಣ ಮಾಡಿಕೊಳ್ಳಬೇಕು ಎಂದರು.

ವಕೀಲರು ಹಾಗೂ ಬಾಲ ನ್ಯಾಯ ಮಂಡಳಿಯ ಸದಸ್ಯರಾದ ಪಿ.ಎಂ. ವಾಲಿ ವಿಶೇಷ ಉಪನ್ಯಾಸ ನೀಡಿ, ಹದಿಹರೆಯದ ಯುವಕರು ಆಧುನಿಕ-ತಾಂತ್ರಿಕ ಸೌಲಭ್ಯಗಳ ಉಪಯೋಗಕ್ಕಿಂತ ದುರುಪಯೋಗಪಡಿಸಿಕೊಳ್ಳುವ ಪ್ರಕರಣಗಳು ಹೆಚ್ಚಾಗುತ್ತಿವೆ. ಸಮಾಜದ ಸದೃಢ ಪ್ರಜೆಯಾಗಿ ಬದುಕಲು ಎಲ್ಲರಿಗೂ ಸಾಮಾಜಿಕ ನ್ಯಾಯ ಅವಶ್ಯವಾಗಿ ಬೇಕು. ಯಾವುದೇ ಜಾತಿ-ಮತ-ಲಿಂಗ ಭೇದಭಾವ ಇಲ್ಲದೆ ಸಾಮಾಜಿಕ ಸಮಾನತೆಯೊಂದಿಗೆ ವಿಶಾಲ ದೃಷ್ಟಿಕೋನ ಬೆಳೆಸಿಕೊಳ್ಳಬೇಕು ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ವಕೀಲರ ಸಂಘದ ಅಧ್ಯಕ್ಷ ಅನಿಲ್ ಮಾನೆ ಮಾತನಾಡುತ್ತಾ, ಸಾಮಾಜಿಕ ಬದ್ಧತೆ ಎಲ್ಲರ ಧ್ಯೇಯವಾಗಬೇಕು. ಸದ್ವಿಚಾರವನ್ನು ಅಳವಡಿಸಿಕೊಳ್ಳುವ ಮೂಲಕ ಯಾವುದೇ ತಾರತಮ್ಯವಿಲ್ಲದೆ ಸಮಾನತೆಯ ಬದುಕನ್ನು ರೂಪಿಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆಯನ್ನು ಆಡಳಿತ ಮಂಡಳಿಯ ಸದಸ್ಯರಾದ ಶಿವನಗೌಡ ಪಾಟೀಲ್ ವಹಿಸಿದ್ದರು. ಉಪನ್ಯಾಸಕರಾದ ಎಮ್.ಕೆ. ಲಮಾಣಿ ಸ್ವಾಗತಿಸಿದರು. ಸಾಂಸ್ಕೃತಿಕ ವಿಭಾಗದ ಮುಖ್ಯಸ್ಥರಾದ ಉಪನ್ಯಾಸಕಿ ಸುಧಾ ಹುಚ್ಚಣ್ಣವರ ಕಾರ್ಯಕ್ರಮ ನಿರೂಪಿಸಿದರು. ದ್ವಿತೀಯ ಪಿಯುಸಿಯ ವಿದ್ಯಾರ್ಥಿನಿಯರಾದ ಮಧು ಗಾಣಿಗೇರ್ ಹಾಗೂ ಸಂಗಡಿಗರು ಪ್ರಾರ್ಥಿಸಿದರು.

ಸಿ.ಎಲ್. ಜಾದವ್, ದಿನೇಶ್, ವಿನಾಯಕ ಹಾಗೂ ಉಪನ್ಯಾಸಕರಾದ ಎಫ್.ಎ. ಬಾಬುಖಾನವರ, ಎಂ.ಎಂ. ನದಾಫ್, ವಾಯ್.ಎಸ್. ಪಂಗಣ್ಣವರ್, ಬಸವರಾಜ್, ಶಿರುಂದ್, ಪ್ರವೀಣ್ ಹೊಸೂರ್, ಮುಂತಾದವರು ಉಪಸ್ಥಿತರಿದ್ದರು.

ಕಾಲೇಜಿನ ಪ್ರಾಚಾರ್ಯ ಎಂ.ಸಿ. ಭಜಂತ್ರಿ ಮಾತನಾಡಿ, ದೇಶದ ಪ್ರಜೆಯಾಗಿ ನಾವೆಲ್ಲರೂ ಕಾನೂನನ್ನ ಗೌರವಿಸುವುದು ಹಾಗೂ ಕಾನೂನಿನ ನಿಯಮಗಳನ್ನು ತಪ್ಪದೇ ಪಾಲಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಹಾಗೆಯೇ ಇಂದಿನ ಮಕ್ಕಳನ್ನು ಸದೃಢ ಸಮಾಜಕ್ಕೆ ನಿರ್ಮಾಣಗೊಳಿಸುವಲ್ಲಿ ಇಂತಹ ಸಂವಿಧಾನಿಕ ನಿಯಮಗಳನ್ನು, ಕರ್ತವ್ಯಗಳನ್ನು ಜ್ಞಾಪಿಸುವ ಅವಶ್ಯಕತೆ ಇದೆ. ಇಂದಿನ ಯುವ ಜನಾಂಗ ಕಾನೂನಿನ ತಿಳುವಳಿಕೆ ಇಲ್ಲದೆ ಅದೆಷ್ಟೋ ತಪ್ಪುಗಳನ್ನು ಮಾಡುತ್ತಿರುವುದು ಕಂಡು ಬರುತ್ತಿದ್ದು, ಇವೆಲ್ಲವುಗಳನ್ನು ತಡೆಗಟ್ಟುವುದು ಪ್ರಜ್ಞಾವಂತ ಸಮಾಜದ ಪ್ರತಿಯೊಬ್ಬ ಪ್ರಜೆಯ ಜವಾಬ್ದಾರಿಯಾಗಿದೆ ಎಂದರು.

## ಕ್ರಿಯಾಶೀಲ ಮಠಾಧೀಶರಿಂದ ಎಲ್ಲವೂ ಸಾಧ್ಯ

▶▶ ಮೊದಲನೇ ಪುಟದಿಂದ

ಇಂದು ನರೇಗಲ್ಲದ ಎಲ್ಲ ನಿವೃತ್ತ ಸೈನಿಕರು ಬಂದು ಈ ಧ್ವಜಾರೋಹಣವನ್ನು ಅವಿಸ್ಮರಣೀಯಗೊಳಿಸಿದ್ದಕ್ಕಾಗಿ ಎಲ್ಲರನ್ನೂ ಹೃದಯದುಂಬಿ ಆಶೀರ್ವದಿಸುವುದಾಗಿ ಶ್ರೀಗಳು ತಿಳಿಸಿದರು.

ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ಪರಿಷತ್ ಧ್ವಜಾರೋಹಣ ನೆರವೇರಿಸಿದರೆ, ತಾಲೂಕಾ ಅಧ್ಯಕ್ಷ ಅಮರೇಶ ಗಾಣಿಗೇರ ಕನ್ನಡ ಧ್ವಜಾರೋಹಣ ನೆರವೇರಿಸಿದರು. ಈ ಸಂದರ್ಭದಲ್ಲಿ ನಾಡಿನ ಅನೇಕ ಹರ-ಗುರು-ಚರ ಮೂರ್ತಿಗಳು, ಹೋಬಳಿ ಘಟಕದ ಅಧ್ಯಕ್ಷ ಎಂ.ವಿ. ವೀರಾಪೂರ, ಮಿಥುನ ಪಾಟೀಲ, ವಿ.ಬಿ. ಸೋಮನಕಟ್ಟಿಮಠ, ಅಂದಪ್ಪ ಬಿಚ್ಚೂರ, ಫಕೀರಪ್ಪ ಕುಕನೂರ, ಜಗದೀಶ ಕರಡಿ ಸೇರಿದಂತೆ ನಿಡಗುಂದಿಕೊಪ್ಪ, ನಿಡಗುಂದಿ, ಹಾಲಕೆರೆ, ನರೇಗಲ್ಲ ಮತ್ತು ತಾಲೂಕಿನ ಎಲ್ಲ ಸಾಹಿತ್ಯಾಭಿಮಾನಿಗಳು ಉಪಸ್ಥಿತರಿದ್ದರು.


ಕರ್ನಾಟಕ ಸರಕಾರ

**ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ**

**Ph/Fax : 08372-297213, E-Mail : gimsgadag@gmail.com**

ಸಂ.GIMS/TENDER/33KV/ 127/2024-25 ದಿನಾಂಕ : 20.02.2025

**ಇ-ಟೆಂಡರ ಪ್ರಕಟಣೆ**

ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿರುವ 33ಕೆ.ವಿ ಯ ವಿದ್ಯುತ್ ಘಟಕವನ್ನು ನಿರ್ವಹಣೆ ಮಾಡಲು ಟೆಂಡರ್ ಆಹ್ವಾನಿಸಲಾಗಿದ್ದು, ಆಸಕ್ತಿಯುಳ್ಳ ಅಧಿಕೃತ ಸಂಸ್ಥೆಗಳಿಂದ ದ್ವಿ-ಲಕೋಟೆ ಪದ್ಧತಿಯಲ್ಲಿ ಇ-ಪ್ರೋಕ್ಯೂರ್‌ಮೆಂಟ್‌ನಲ್ಲಿ ಟೆಂಡರ್ ಮೂಲಕ ದಿನಾಂಕ : **21.02.2025** ರಿಂದ ದಿನಾಂಕ : **14.03.2025**ರ ಸಾಯಂಕಾಲ 4:00 ಗಂಟೆವರೆಗೆ ಇ-ಪೋರ್ಟಲ್ ಸಂಖ್ಯೆ : DME/2024-25/IND1130 (https://kppp.karnataka.gov.in) ನಲ್ಲಿ ಟೆಂಡರ ಅಪ್‌ಲೋಡ್ ಮಾಡಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕರ್ತವ್ಯದ ದಿನಗಳಲ್ಲಿ ಕೆಳಗಡೆ ಸಹಿ ಮಾಡಿದವರ ಕಛೇರಿಗೆ ಸಂಪರ್ಕಿಸಬಹುದು. (ಅಂದಾಜು ಮೊತ್ತ ರೂ. **24.00** ಲಕ್ಷಗಳು)

**ಸಹಿ/- ನಿರ್ದೇಶಕರು,**
**ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ**

ವಾಸಾಸಂಇ/ಗದಗ/ಕೆಎಸ್‌ಎಂಸಿಎ/633/24-25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka